MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 21 | ಬುಧವಾರ : 05-11-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 21 | WEDNESDAY : 05-11-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಮತಪಟ್ಟಿ ಪರಿಷ್ಕರಣೆ ಆರಂಭ



**ನವದೆಹಲಿ,ನ. 4–** ಚುನಾವಣಾ ಆಯೋಗ (ಇಲೆಕ್ಷನ್ ಕಮಿಷನ್) 9 ರಾಜ್ಯಗಳು ಮತ್ತು 3 ಕೇಂದ್ರಾಡಳಿತ ಪ್ರದೇಶಗಳಲ್ಲಿ ಮತದಾರರ ಪಟ್ಟಿಯನ್ನು ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಅಭಿಯಾನದ ಎರಡನೇ ಹಂತದ ಅಭಿಯಾನಕ್ಕೆ ಕೇಂದ್ರ ಚುನಾವಣಾ ಆಯೋಗ ಇಂದು ಚಾಲನೆ ನೀಡಿದೆ.

ಮತದಾರರ ಪಟ್ಟಿಯಿಂದ ಬಿಹಾರ್‌ನಲ್ಲಿ ನಡೆದ ಮತಪಟ್ಟಿ ಪರಿಷ್ಕರಣೆಯ ನಂತರ ಈ ಕಾರ್ಯಾಚರಣೆ ಮುಂದುವರಿಯುತ್ತಿದೆ, ಅಲ್ಲಿ 68 ಲಕ್ಷಕ್ಕೂ ಹೆಚ್ಚು ಹೆಸರುಗಳನ್ನು ಪರಿಶೀಲನೆಯ ನಂತರ ತೆಗೆದುಹಾಕಲಾಗಿತ್ತು.

ಈ ಎಸ್‌ಐಆರ್ 2.0 ಅಭಿಯಾನವು ತಮಿಳುನಾಡು, ಕೇರಳ, ಪಶ್ಚಿಮ ಬಂಗಾಳ, ಉತ್ತರ ಪ್ರದೇಶ, ಮಧ್ಯಪ್ರದೇಶ, ರಾಜಸ್ಥಾನ, ಛತ್ತೀಸ್ಗಢ, ಗೋವಾ, ಗುಜರಾತ್, ಪುದುಚೇರಿ, ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು ಮತ್ತು ಲಕ್ಷದ್ವೀಪದಲ್ಲಿ ನಡೆಯಲಿದೆ. ಇವುಗಳಲ್ಲಿ, ತಮಿಳುನಾಡು, ಕೇರಳ, ಪಶ್ಚಿಮ ಬಂಗಾಳ ಮತ್ತು ಪುದುಚೇರಿಯಲ್ಲಿ 2026ರಲ್ಲಿ ವಿಧಾನಸಭೆ ಚುನಾವಣೆಗಳು ನಡೆಯಬೇಕಿದೆ.

**ಎಸ್‌ಐಆರ್‌ನ ಉದ್ದೇಶ–**ವಿಶೇಷ ತೀವ್ರ ಪರಿಷ್ಕರಣೆಯ ಮುಖ್ಯ ಉದ್ದೇಶವೆಂದರೆ ಅನರ್ಹ ಮತದಾರರು, ಅವರಲ್ಲಿ ಅಕ್ರಮ ವಲಸೆಗಾರರೂ ಸೇರಿದ್ದಾರೆ, ಅವರ ಜನ್ಮ ಸ್ಥಳ ಪರಿಶೀಲಿಸಿ ಗುರುತಿಸಿ ತೆಗೆದುಹಾಕುವುದು. ಬಾಂಗ್ಲಾದೇಶ ಮತ್ತು ಮ್ಯಾನ್ಮಾರ್‌ನಿಂದ ಅಕ್ರಮ ವಲಸೆಗಾರರ ವಿರುದ್ಧ ಹಲವಾರು ರಾಜ್ಯಗಳಲ್ಲಿ ನಡೆಯುತ್ತಿರುವ ಕಾರ್ಯಾಚರಣೆಗಳ ಹಿನ್ನೆಲೆಯಲ್ಲಿ ಈ ಅಭಿಯಾನವು ಹೆಚ್ಚಿನ ಪ್ರಾಮುಖ್ಯತೆ ಪಡೆದಿದೆ.

ಚುನಾವಣಾ ಮುಖ್ಯ ಆಯುಕ್ತ ಜ್ಞಾನೇಶ್ ಕುಮಾರ್ ಇದನ್ನು "ವಿವರವಾದ, ಜನಕೇಂದ್ರಿತ ಅಭ್ಯಾಸ" ಎಂದು ಹೇಳಿದ್ದಾರೆ. ಬೂತ್ ಲೆವೆಲ್ ಅಧಿಕಾರಿಗಳು (ಬಿಎಲ್‌ಒ) ಪ್ರತಿ ಮನೆಗೆ ಮೂರು ಬಾರಿ ಭೇಟಿ ನೀಡಿ ಮತದಾರರ ವಿವರಗಳನ್ನು ಪರಿಶೀಲಿಸಲಿದ್ದಾರೆ. **(2ನೇ ಪುಟಕ್ಕೆ)**

## ಕಬ್ಬಿಗೆ ಬೆಲೆ ನಿಗದಿಗೆ ಆಗ್ರಹಿಸಿ ರೊಚ್ಚಿಗೆದ್ದ ರೈತರು : ಹಲವೆಡೆ ಕಲ್ಲು ತೂರಾಟ, ಹೆದ್ದಾರಿ ಬಂದ್



**ಬೆಂಗಳೂರು,ನ.4–** ಕಬ್ಬು ಬೆಳೆಗೆ ರಾಜ್ಯ ಸರ್ಕಾರ ಬೆಲೆ ನಿಗದಿಪಡಿಸಬೇಕೆಂದು ಕಳೆದ ಐದು ದಿನಗಳಿಂದ ಬೆಳಗಾವಿ ಹಾಗೂ ಬಾಗಲಕೋಟೆ ಜಿಲ್ಲೆಗಳಲ್ಲಿ ರೈತರು ನಡೆಸುತ್ತಿದ್ದ ಹೋರಾಟ ವಿಕೋಪಕ್ಕೆ ತಿರುಗಿದ್ದು, ಕೆಲವು ಕಡೆ ಕಲ್ಲು ತೂರಾಟ ಹಾಗೂ ಹೆದ್ದಾರಿ ಬಂದ್ ಮಾಡುವ ಮೂಲಕ ಸರ್ಕಾರದ ವಿರುದ್ಧ ಸಿಡಿದೆದ್ದಿದ್ದಾರೆ.

ದರ ನಿಗದಿ ಹಾಗೂ ಬಾಕಿ ಹಣವನ್ನು ಬಿಡುಗಡೆ ಮಾಡಬೇಕೆಂದು ಒತ್ತಾಯಿಸಿ ಬಾಗಲಕೋಟೆ ಜಿಲ್ಲೆಯ ಮುಧೋಳ ಮತ್ತು ಜಮಖಂಡಿ ತಾಲ್ಲೂಕಿನ ಪ್ರಭುಲಿಂಗೇಶ್ವರ ಸಕ್ಕರೆ ಕಾರ್ಖಾನೆ ಮುಂದೆ ನಡೆಸುತ್ತಿದ್ದ ಪ್ರತಿಭಟನೆ ಏಕಾಏಕಿ ಹಿಂಸಾರೂಪಕ್ಕೆ ತಿರುಗಿದೆ.ಈವರೆಗೂ ಸಹನೆಯಿಂದಲೇ ಪ್ರತಿಭಟನೆ ನಡೆಸುತ್ತಿದ್ದ ಸಾವಿರಾರು ರೈತರು ಇಂದು ಏಕಾಏಕಿ ಪ್ರಭುಲಿಂಗೇಶ್ವರ ಸಕ್ಕರೆ ಕಾರ್ಖಾನೆ ಆವರಣದಲ್ಲಿ ನಿಂತಿದ್ದ ವಾಹನಗಳು ಮತ್ತು ಕಚೇರಿಗಳ ಮೇಲೆ ಕಲ್ಲು ತೂರಾಟ ನಡೆಸಿ ಸರ್ಕಾರದ ಧಿಕ್ಕಾರದ ಘೋಷಣೆಗಳನ್ನು ಕೂಗಿದರು.

ಮೂಡಲಗಿ ತಾಲೂಕಿನ ಗುರ್ಲಾಪುರದಲ್ಲಿ ಕಳೆದ 5 ದಿನಗಳಿಂದ ನಿರಂತರ ಅಹೋರಾತ್ರಿ ಧರಣಿ ನಡೆಸುತ್ತಿರುವ ಕಬ್ಬು ಬೆಳೆಗಾರರು, ಸರ್ಕಾರದ ನಿರ್ಲಕ್ಷ್ಯದ ವಿರುದ್ಧ ಕಿಡಿಕಾರಿದ್ದಾರೆ. ಕಳೆದ 5 ದಿನಗಳಿಂದ ರೈತರು ಬಿರುಸಿನ ಗಾಳಿಯಲ್ಲೂ, ಚಳಿಯಲ್ಲೂ ಅಹೋರಾತ್ರಿ ಕುಳಿತು ಹೋರಾಟ ನಡೆಸುತ್ತಿದ್ದಾರೆ. ಕೆಲವರು ಸ್ಥಳದಲ್ಲೆ ಊಟ, ನಿದ್ದೆ ಮಾಡುತ್ತಾ ಹೋರಾಟ ಮುಂದುವರೆಸಿದ್ದಾರೆ.

ಹಸಿರು ಬಾವುಟಗಳನ್ನು ಹಿಡಿದಿರುವ ರೈತರು, ರಾಜ್ಯ ಸರ್ಕಾರ ಮತ್ತು ಸಕ್ಕರೆ ಕಾರ್ಖಾನೆ ಮಾಲೀಕರ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದಾರೆ. ಸರ್ಕಾರ ರೈತರ ಹಿತಾಸಕ್ತಿಗಳನ್ನು ನಿರ್ಲಕ್ಷಿಸಿದೆ ಎಂದು ಆರೋಪಿಸಿದ್ದಾರೆ. ಪ್ರತಿಭಟನೆ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದ್ದು, ದಿನ ಕಳೆದಂತೆ ಪ್ರತಿಭಟನಾಕಾರರ ಸಂಖ್ಯೆ ಹೆಚ್ಚುತ್ತಲೇ ಇದೆ. ಪ್ರತಿಭಟನಾ ಸ್ಥಳದಲ್ಲಿಯೇ ರೈತರು ತಾತ್ಕಾಲಿಕ ಅಡುಗೆ ಮನೆಗಳನ್ನು ಸ್ಥಾಪಿಸಿದ್ದು, ಪ್ರತಿಭಟನಾಕಾರರಿಗೆ ಆಹಾರ ವಿತರಿಸಿದರು. **(2ನೇ ಪುಟಕ್ಕೆ)**

## ಶ್ರೀದಿಗಂಬರವಧೂತ ಶ್ರೀಅನ್ನಮಯ ತಾತಾ ಹಠಯೋಗಿ ವೈಭವದ ಉಚ್ಚಾಯ ಮಹೋತ್ಸವ

**ಯುವ ಮಾರ್ಗ ಸುದ್ದಿ**

**ಮಾನ್ವಿ,ನ.4–** ಪಟ್ಟಣದಲ್ಲಿನ ಬೆಟ್ಟದಗವಿಯ ಶ್ರೀ ದಿಗಂಬರವಧೂತ ಶ್ರೀಅನ್ನಮಯ ತಾತಾ ಮಹಾ ಹಠಯೋಗಿಯವರ ದೇವಸ್ಥಾನದ ಆವರಣದಲ್ಲಿ ಸೋಮವಾರ 40 ನೇ ವಾರ್ಷಿಕ ಆರಾಧನಾ ಮಹೋತ್ಸವ ಹಾಗೂ ಉಚ್ಚಾಯ ಮಹೋತ್ಸವ ಅಂಗವಾಗಿ ಶ್ರೀಅನ್ನಮಯ ತಾತಾ ಮೂರ್ತಿಗೆ ವಿಶೇಷ ಪೂಜೆಯನ್ನು ಸಲ್ಲಿಸಲಾಯಿತು. ಸಂಜೆ ಮಾಜಿ ಶಾಸಕ ರಾಜಾ ವೆಂಕಟಪ್ಪನಾಯಕರವರ ನಿವಾಸದಲ್ಲಿ ಸಾರ್ವಜನಿಕರಿಗೆ ಅನ್ನದಾಸೋಹ ನಡೆಯಿತು ಪಲ್ಲಕ್ಕಿಯಲ್ಲಿ ಶ್ರೀಅನ್ನಮಯ ತಾತಾನವರ ಉತ್ಸವ ಮೂರ್ತಿಯನ್ನು ಇಟ್ಟು ಶ್ರೀ ದಿಗಂಬರವಧೂತ ಶ್ರೀಅನ್ನಮಯ ತಾತಾನವರ ಭಾವಚಿತ್ರದೊಂದಿಗೆ ಪಟ್ಟಣದ ಪ್ರಮುಖ ಬೀದಿಗಳ ಮೂಲಕ ದೇವಸ್ಥಾನ ದವರೆಗೆ ಮೆರವಣಿಗೆ ನಡೆಸಲಾಯಿತು. ಉಚ್ಚಾಯ ಮಹೋತ್ಸ ವಕ್ಕೆ ಮಾಜಿ ಶಾಸಕ ರಾಜಾ ವೆಂಕಟಪ್ಪನಾಯಕ ಚಾಲನೆ ನೀಡಿದರು. ಸಾವಿರಾರು ಭಕ್ತರ ಜಘೋಷದೊಂದಿಗೆ ವೈಭವದಿಂದ ಶ್ರೀ ದಿಗಂಬರವಧೂತ ಶ್ರೀಅನ್ನಮಯ ತಾತಾ ಮಹಾ ಹಠಯೋಗಿಯವರ ಉಚ್ಚಾಯ ಮಹೋತ್ಸವ ನಡೆಯಿತು.

ಪುರಸಭೆ ಸದಸ್ಯರಾದ ರಾಜಾ ಮಹೇಂದ್ರ ನಾಯಕ ಹಾಗೂ ಜೆಡಿಎಸ್.ರಾಜ್ಯ ಯುವ ಘಟಕದ ಉಪಾಧ್ಯಕ್ಷರಾದ ರಾಜಾ ಮಹೇಂದ್ರನಾಯಕ, ಮುಖಂಡರಾದ ಡಾ.ಈರಣ್ಣ ಮರ್ಲಟ್ಟಿ,



ಬೆಟ್ಟದಗವಿಯ ಶ್ರೀ ದಿಗಂಬರವಧೂತ ಶ್ರೀಅನ್ನಮಯ ತಾತಾ ಮಹಾ ಹಠಯೋಗಿಯವರ ದೇವಸ್ಥಾನ ಸೇವಾ ಸಮಿತಿಯ ಸದಸ್ಯರು ಸೇರಿದಂತೆ ಗಣ್ಯರು,ಜನಪ್ರತಿನಿಧಿಗಳು,ಭಕ್ತರು ಭಾಗವಹಿಸಿದರು.



## ವಿದ್ಯಾರ್ಥಿಗಳು ದುಶ್ಚಟಕ್ಕೆ ಬಲಿಯಾಗದೆ ಓದಿನ ಕಡೆ ಗಮನ ಹರಿಸಿ : ಶಾಸಕ ಮಾನಪ್ಪ ವಜ್ಜಲ್

**ಯುವ ಮಾರ್ಗ ಸುದ್ದಿ**



**ಲಿಂಗಸುಗೂರು,ನ.4–**ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಶಿಕ್ಷಣ, ಕ್ರೀಡೆ ಮತ್ತು ಸಾಂಸ್ಕೃತಿಕ ಕ್ಷೇತ್ರದಲ್ಲಿ ಉತ್ತಮ ಸಾಧನೆಗೈಯುತ್ತಿರುವುದು ಶ್ಲಾಘನೀಯ ಎಂದು ಶಾಸಕ ಮಾನಪ್ಪ ವಜ್ಜಲ ಹೇಳಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಬಿ.ಎ ಬಿ.ಕಾಂ ಮತ್ತು ಬಿ.ಎಸ್ಸಿ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಮತ್ತು ವಿವಿಧ ಘಟಕಗಳ ಉದ್ಘಾಟನಾ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರಿ ಕಾಲೇಜು ಖಾಸಗಿ ಶಿಕ್ಷಣ ಸಂಸ್ಥೆಗಳನ್ನು ಮೀರಿಸುವ ರೀತಿಯಲ್ಲಿ ಹಲವಾರು ಸೌಲಭ್ಯ ಹೊಂದಿದ್ದು ಉತ್ತಮ ಬೋಧಕರು ಮತ್ತು ವಿದ್ಯಾರ್ಥಿಗಳ ಬಗೆಗೆ ಅಪಾರ ಕಾಳಜಿಯುಳ್ಳ ಪ್ರಾಂಶುಪಾಲರನ್ನು ಒಳಗೊಂಡಿದೆ. ಮೂರು ಬಾರಿ ಶಾಸಕನಾಗಿ ಕಾಲೇಜು ಅಭಿವೃದ್ಧಿ ಹೊಂದಲು ಸಹಕರಿಸಿದ್ದೇನೆ. ಕೆಕೆಆರ್ ಡಿಬಿಯ ಶಿಕ್ಷಣಕ್ಕಾಗಿ ಮೀಸಲಿರುವ ನಿಧಿಯನ್ನು ತಂದು ಕಟ್ಟಡ ನಿರ್ಮಾಣ ಮಾಡಿದ್ದೇನೆ. ಬಡ ವಿದ್ಯಾರ್ಥಿಗಳಿಗೆ ತೊಂದರೆ ಆಗದ ರೀತಿಯಲ್ಲಿ ಕಾಲೇಜಿನ ಅನೇಕ ಸಮಸ್ಯೆಗಳನ್ನು ಪರಿಹರಿಸಿದ್ದೇನೆ. ವಿದ್ಯಾರ್ಥಿಗಳು ದುಶ್ಚಟಕ್ಕೆ ಬಲಿಯಾಗದೆ ಓದಿನ ಕಡೆ ಗಮನ ಹರಿಸಿ ಸರ್ಕಾರಿ ಉದ್ಯೋಗ ಪಡೆದು ದೇಶ ರಕ್ಷಣೆಗೆ ಪಣ ತೊಡಿ ಎಂದು ಕರೆ ನೀಡಿದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಮಸ್ಕಿಯ ದೇವನಾಂಪ್ರಿಯ ಅಶೋಕ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಾಣಿಜ್ಯ ಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ. ಬಸವರಾಜ ತಡಕಲ್ಲ ಹಾಗೂ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ. ವೆಂಕಟನಾರಾಯಣ**(2ನೇಪುಟಕ್ಕೆ)**

## ಮಾಜಿ ಸಚಿವ ಹಾಗೂ ಬಾಗಲಕೋಟೆ ಕಾಂಗ್ರೆಸ್ ಶಾಸಕ ಹೆಚ್.ವೈ.ಮೇಟಿ ನಿಧನ



**ಬೆಂಗಳೂರು. ನ.4–** ಮಾಜಿ ಸಚಿವ ಹಾಗೂ ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಶಾಸಕ ಎಚ್.ವೈ. ಮೇಟಿ ಅವರು (79) ಇಂದು ನಿಧನರಾಗಿದ್ದಾರೆ. ಅನಾರೋಗ್ಯದಿಂದಾಗಿ ನಗರದ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದ ಮೇಟಿ ಅವರು ಚಿಕಿತ್ಸೆ ಫಲಕಾರಿಯಾಗದೆ ನಿಧನ ಹೊಂದಿದ್ದಾರೆ. 1946 ಅಕ್ಟೋಬರ್ 9ರಂದು ಬಾಗಲಕೋಟೆ ಜಿಲ್ಲೆಯ ತಿಮಾಪುರದಲ್ಲಿ ಜನಿಸಿದ್ದ ಮೇಟಿ ಅವರು, ಬಾಗಲಕೋಟೆ ಡಿಸಿಸಿ ಬ್ಯಾಂಕ್ ನಿರ್ದೇಶಕರಾಗಿ ರಾಜಕೀಯ ಜೀವನ ಆರಂಭಿಸಿದ್ದರು.

1989ರಲ್ಲಿ ಗುಳೇದಗುಡ್ಡ ಕ್ಷೇತ್ರದಿಂದ ವಿಧಾನಸಭೆಗೆ ಮೊದಲ ಬಾರಿ ಚುನಾಯಿತರಾಗಿದ್ದರು. 1989, 1994 ಮತ್ತು 2004ರಲ್ಲಿ ಗುಳೇದಗುಡ್ಡ ಕ್ಷೇತ್ರವನ್ನು ಪ್ರತಿನಿಧಿಸಿದ್ದ ಅವರು 2008ರಲ್ಲಿ ಕ್ಷೇತ್ರ ಪುನರ್‌ವಿಂಗಡಣೆಯಿಂದ ಗುಳೇದಗುಡ್ಡ ಕ್ಷೇತ್ರ ಇಲ್ಲವಾದ ಬಳಿಕ, ಬಾಗಲಕೋಟೆ ಕ್ಷೆ?ತ್ರಕ್ಕೆ ಸ್ಥಳಾಂತರವಾದರು. 2013ರಲ್ಲಿ ಬಾಗಲಕೋಟೆ ಕ್ಷೇತ್ರದಿಂದ ಗೆದ್ದು ಆಯ್ಕೆಯಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಚಿವ ಸಂಪುಟದಲ್ಲಿ ಅಬಕಾರಿ ಸಚಿವರಾಗಿ ಕೆಲಸ ನಿರ್ವಹಿಸಿದ್ದರು.

ಕುರುಬ ಸಮುದಾಯದ ಪ್ರಭಾವಿ ನಾಯಕರಾಗಿದ್ದ ಹುಲ್ಲಪ್ಪ ಯಮುನಪ್ಪ ಮೇಟಿ ಮಹಿಳೆಯೊಂದಿಗೆ ಲೈಂಗಿಕ ಹಗರಣದಲ್ಲಿ ಸಿಲುಕಿ ಇದಕ್ಕೆ ಸಂಬಂಧಪಟ್ಟಂತ ಸಿಡಿ ಬಹಿರಂಗವಾದ ಬಳಿಕ 2016ರ ಡಿಸೆಂಬರ್‌ನಲ್ಲಿ ತಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕಾಯಿತು. ಈ ವಿವಾದ ಹೊರತು ಪಡಿಸಿದರೆ ಮೇಟಿ ರಾಜಕಾರಣದಲ್ಲಿ ಸಜ್ಜನ, ಸೌಮ್ಯ ಸ್ವಭಾವದ ಅಜಾತಶತ್ರು ಎಂದೇ ಗುರುತಿಸಿಕೊಂಡಿದ್ದಾರೆ.

2018ರ ಚುನಾವಣೆಯಲ್ಲಿ ವಿಧಾನಸಭೆ ಚುನಾವಣೆಯಲ್ಲಿ ಸೋಲು ಕಂಡಿದ್ದರು. 2013ರಲ್ಲಿ ಬಾಗಲಕೋಟೆ ಕ್ಷೇತ್ರದಿಂದ ಪುನರ್ ಆಯ್ಕೆಯಾಗಿದ್ದರು. 5 ಬಾರಿ ಶಾಸಕರಾಗಿದ್ದ ಮೇಟಿ ಮತ್ತೆ ಸಂಪುಟ ಸೇರಲು ಪ್ರಯತ್ನಿಸಿದ್ದರು. ಆದರೆ ರಾಜ್ಯ ರಾಜಕಾರಣದ ಒತ್ತಡದಲ್ಲಿ ಅದು ಸಾಧ್ಯವಾಗಿರಲಿಲ್ಲ.

ಇತ್ತೀಚೆಗೆ ಅನಾರೋಗ್ಯದಿಂದ ಆಸ್ಪತ್ರೆಗೆ ದಾಖಲಾಗಿದ್ದ ಮೇಟಿಯವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಇತ್ತೀಚೆಗೆ ಭೇಟಿ ಮಾಡಿ ಆರೋಗ್ಯ ವಿಚಾರಿಸಿದ್ದರು. ಮೇಟಿ ಅವರ ನಿಧನದ ಸುದ್ದಿ ತಿಳಿಯುತ್ತಿದ್ದಂತೆ ಮೈಸೂರಿನಲ್ಲಿದ್ದ ಸಿದ್ದರಾಮಯ್ಯ ತಮ ಪ್ರವಾಸವನ್ನು ಮೊಟಕುಗೊಳಿಸಿ ಬೆಂಗಳೂರಿಗೆ ಆಗಮಿಸಿ, ಅಂತಿಮ ದರ್ಶನ ಪಡೆದಿದ್ದಾರೆ.

## ಕರ್ನಾಟಕ ರಕ್ಷಣಾ ವೇದಿಕೆ ಕನ್ನಡ ಸೇನೆಯ ಭಾಷಾಸಾಬ್ ಜಿಲ್ಲಾ ಘಟಕದ ಉಪಾಧ್ಯಕ್ಷರನ್ನಾಗಿ ನೇಮಕ

**ಯುವ ಮಾರ್ಗ ಸುದ್ದಿ**

**ಸಿಂಧನೂರು,ನ.4–**ಕರ್ನಾಟಕ ರಕ್ಷಣಾ ವೇದಿಕೆ ಕನ್ನಡ ಸೇನೆಯ ರಾಜ್ಯಾಧ್ಯಕ್ಷರ ಆದೇಶದ ಮೇರಿಗೆ ಜಿಲ್ಲಾಧ್ಯಕ್ಷ ಲಕ್ಷ್ಮಣ್ ಭೋವಿ ಮತ್ತು ತಾಲೂಕ ಅಧ್ಯಕ್ಷ ರಫೀಕ್ ಕುನ್ನಟಗಿ ಅವರ ನೇತೃತ್ವದಲ್ಲಿ

ನಗರದ ಕಾರ್ಯಾಲಯದಲ್ಲಿ ಕಾರ್ಯಾಲಯದಲ್ಲಿ ನೂತನ ಕರ್ನಾಟಕ ರಕ್ಷಣಾ ವೇದಿಕೆ ಕನ್ನಡ ಸೇನೆಯ ರಾಯಚೂರು ಜಿಲ್ಲಾ ಘಟಕದ ಉಪಾಧ್ಯಕ್ಷರನ್ನಾಗಿ ಭಾಷಾಸಾಬ್ ಅವರನ್ನು ನೇಮಕ ಗೊಳಿಸಲಾಯಿತು.

ಇದೇ ಸಂದರ್ಭದಲ್ಲಿ ಖಾಜಾ ಬನ್ನಿಗನೂರು



ಉತ್ತರ ಕರ್ನಾಟಕ ಅಧ್ಯಕ್ಷರು,ಜಿಲ್ಲಾ ಸಂಚಾಲಕ ರಾದ ಹುಸೇನ್ ಭಾಷಾ,ಜಿಲ್ಲಾ ಸಹ ಕಾರ್ಯದರ್ಶಿ ಮಲ್ಲಿಕಾರ್ಜುನ ಕುನ್ನಟಗಿ,ಹಾಗೂ ಸಂಘಟನೆಯ ಮುಖಂಡರು ಇದ್ದರು.

ಯುವ ಮಾರ್ಗ
ಬುಧವಾರ: 05–11–2025

# ಮತಪಟ್ಟಿ ಪರಿಷ್ಕರಣೆ ಆರಂಭ

ಹೊಸ ಮತದಾರರು ದಾಖಲೆಯಾಗಲು ನೆರವು ನೀಡಲಿದ್ದಾರೆ. ಮನೆ ಖಾಲಿ ಇದ್ದರೆ, ನೆರೆಹೊರೆಯವರನ್ನು ಸಂಪರ್ಕಿಸಿ ಕಾರಣ ತಿಳಿಯಲಾಗುವುದು. ಮಸೂದಾ ಪಟ್ಟಿ ಪ್ರಕಟನೆಯ ನಂತರ, ಹಿಂದಿನ ದಾಖಲೆಗಳೊಂದಿಗೆ ಸಂಬಂಧ ಕಂಡುಹಿಡಿಯಲಾಗದ ವ್ಯಕ್ತಿಗಳಿಗೆ ನೋಟೀಸ್ ನೀಡಲಾಗುವುದು.

ವೃದ್ಧರು, ದಿವ್ಯಾಂಗರು, ಅನಾರೋಗ್ಯದಿಂದ ಬಳಲುತ್ತಿರುವವರು ಸೇರಿದಂತೆ ದುರ್ಬಲ ವರ್ಗದವರು ಈ ಪ್ರಕ್ರಿಯೆಯಿಂದ ಅಸೌಕರ್ಯ ಅನುಭವಿಸದಂತೆ ಸ್ವಯಂಸೇವಕರನ್ನು ನಿಯೋಜಿಸಲು ಚುನಾವಣಾ ಆಯೋಗ ಯೋಜನೆ ಹಾಕಿದೆ.

ಬಿಹಾರದ ಎಸ್‌ಐಆರ್‌ನಿಂದ ಪಡೆದ ಪಾಠಗಳ ಆಧಾರದ ಮೇಲೆ, ಚುನಾವಣಾ ಆಯೋಗ ತನ್ನ ಕಾರ್ಯವಿಧಾನದ ನಿಯಮಗಳನ್ನು ನವೀಕರಿಸಿದೆ. ಪರಿಶೀಲನೆಗೆ ಅಗತ್ಯವಾದ ದಾಖಲೆಗಳ ಪಟ್ಟಿಯಲ್ಲಿ ಬಿಹಾರದ ಎಸ್‌ಐಆರ್ ನಂತರ ಪ್ರಕಟವಾದ ಮತದಾರರ ಪಟ್ಟಿಗಳು ಮತ್ತು ಆಧಾರ್ ಕಾರ್ಡ್ ಅನ್ನು ಸೇರಿಸಲಾಗಿದೆ. 2026ರಲ್ಲಿ ಚುನಾವಣೆ ನಡೆಯಬೇಕಿರುವ ಅಸ್ಸಾಂ ರಾಜ್ಯವನ್ನು ಈ ಹಂತದ ಎಸ್‌ಐಆರ್‌ನಿಂದ ಹೊರಗಿಡಲಾಗಿದೆ. ರಾಜ್ಯದಲ್ಲಿ ಸುಪ್ರೀಂ ಕೋರ್ಟ್ ಮೇಲ್ವಿಚಾರಣೆಯಲ್ಲಿ ನಾಗರಿಕ ಪರಿಶೀಲನೆ ನಡೆಯುತ್ತಿರುವುದು ಇದರ ಕಾರಣ.

**ರಾಜಕೀಯ ಪ್ರತಿಕ್ರಿಯೆ–**ಎಸ್‌ಐಆರ್ 2.0 ಪ್ರಾರಂಭವಾಗುವ ಮುನ್ನ, ತಮಿಳುನಾಡು ಸರ್ಕಾರ ಸುಪ್ರೀಂ ಕೋರ್ಟ್‌ನಲ್ಲಿ ಮನವಿ ಸಲಿಸಿತ್ತು. ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ 2026 ರಾಜ್ಯ ಚುನಾವಣೆಗಳ ಮುನ್ನ "ನಿಜವಾದ ಮತದಾರರನ್ನು" ಬಹಿಷ್ಕರಿಸಲು ಚುನಾವಣಾ ಆಯೋಗ ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದ್ದಾರೆ.

ಬಿಹಾರದ ಎಸ್‌ಐಆರ್ ಸಮಯದಲ್ಲಿ ಕೂಡಾ ರಾಜಕೀಯ ಪಕ್ಷಗಳು ಇದೇ ರೀತಿಯ ಆರೋಪಗಳನ್ನು ಮಾಡಿದ್ದವು. ಆದರೆ, ಯಾವುದೇ ನಿಜವಾದ ಮತದಾರರನ್ನು ಪಟ್ಟಿಯಿಂದ ಬಹಿಷ್ಕರಿಸಲಾಗುವುದಿಲ್ಲ ಎಂದು ಚುನಾವಣಾ ಆಯೋಗ ಭರವಸೆ ನೀಡಿದೆ.

# ವಿದ್ಯಾರ್ಥಿಗಳು ದುಶ್ಚಟಕ್ಕೆ ಬಲಿಯಾಗದೆ ಓದಿನ ಕಡೆ ಗಮನ ಹರಿಸಿ : ಶಾಸಕ ಮಾನಪ್ಪ ವಜ್ಜಲ್

ಎಂ ಮಾತನಾ ಡಿದರು.

ಸಾಂಸ್ಕೃತಿಕ ಸಮಿತಿಯ ಸಂಯೋಜಕ ಆಂಜನೇಯ ರಾಮತ್ನಾಳ ಪ್ರಾಸ್ತಾವಿಕ ಮಾತನಾಡಿದರು.

ಇದೇ ಸಂದರ್ಭದಲ್ಲಿ ಕ್ರೀಡಾ ವಿಭಾಗ, ಸಾಂಸ್ಕೃತಿಕ ವಿಭಾಗದಲ್ಲಿ ಸಾಧನೆಗ?ದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ವೀರೇಶ ಮೂಡಲದಿನ್ನಿ ಸ್ವಾಗತಿಸಿದರೆ, ಅನುಪಮ ಪಾಟೀಲ ವಂದನಾರ್ಪಣೆ ಮಾಡಿದರು.ಕನ್ನಡ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಸರಿತಾ ಇಂಚೂರು ಕಾರ್ಯಕ್ರಮ ನಿರೂಪಿಸಿದರು.

ಈ ಸಂದರ್ಭದಲ್ಲಿ  ಬಿಜೆಪಿಯ ಪ್ರಮುಖರಾದ ಗಿರಿಮಲ್ಲನಗೌಡ ಪಾಟೀಲ, ನಾಗಭೂಷಣ ಕೆ, ಕಾಲೇಜು ಅಭಿವ?ದ್ಧಿ ಸಮಿತಿ ಸದಸ್ಯರಾದ ಭೀಮಸೇನ್ ಕಲಕರ್ಣಿ, ಪರಶುರಾಮ ಕೆಂಭಾವಿ, ನಾರಾಯಣಪ್ಪ ನಾಯ್ಕ, ನಿಂಗಪ್ಪ ದೇವಿಕೇರಿ, ಅನಂತದಾಸ, ಅಮರೇಶ, ವಿರುಪಾಕ್ಷಪ್ಪ, ರಾಜು ತಂಬಾಕೆ, ಪ್ರಾಧ್ಯಾಪಕರಾದ ಡಾ. ಹನುಮಂತಪ್ಪ, ಡಾ. ಸಂಗನಗೌಡ, ಗಣೇಶ ದರ್ಬಿ, ಡಾ.ಮಹಾದೇವಪ್ಪ ನಾಗರಾಳ ಸೇರಿ ವಿದ್ಯಾರ್ಥಿಗಳುಇದ್ದರು.

# ಮನಸೂರೆಗೊಂಡ ರೈತರ ಬದುಕು–ಬವಣೆ ಹೇಳುವ 'ಹಿಲಿಯೋಥಿಸ್' ನಾಟಕ



ಯುವ ಮಾರ್ಗ ಸುದ್ದಿ

**ರಾಯಚೂರು, ನ.04–** ನಗರದ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಸಮುದಾಯ ತಂಡದಿಂದ ರವಿವಾರ 'ಹಿಲಿಯೋಥಿಸ್' ಹೆಸರಿನ ನಾಟಕ ಪ್ರದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಭಾಗದ ಹೆಸರಾಂತ ಬರಹಗಾರರು ಹಾಗೂ ಕಾದಂಬರಿಕಾರರಾದ ಡಾ. ಮಹಾಂತೇಶ್ ನವಲ್ಕಲ್ ಅವರ ವಿರಚಿತ ಕಥೆ ಇದಾಗಿದ್ದು, ಅವರ ಪ್ರಸಿದ್ಧ 'ಭಾರತ ಭಾಗ್ಯ ವಿದಾತ' ಎಂಬ ಪುಸ್ತಕದಿಂದ ಆಯ್ದುಕೊಳ್ಳಲಾಗಿದೆ.

ಕೀಟನಾಶಕ ಕಂಪನಿಗಳು ಹಣದಾಸೆಗಾಗಿ ರೈತರ ಜೀವನದ ಜೊತೆಗೆ ಆಟವಾಡುವ ರೀತಿ, ಪಟ್ಟಭದ್ರ ಹಿತಾಸಕ್ತಿಗಳ ಜೊತೆಗೂಡಿ ಮಾಡುವ ಮೋಸ, 'ಕೃಷಿ' ಕ್ಷೇತ್ರವನ್ನು ದಾರಿ ತಪ್ಪಿಸಿ ಹೇಗೆಲ್ಲಾ ತಮ್ಮ ಲಾಭಕ್ಕೆ ದಾರಿ ಮಾಡಿಕೊಳ್ಳುತ್ತವೆ ಎಂಬುದನ್ನು ತೋರಿಸುವ ಸಾಮಾಜಿಕ ನಾಟಕ ಇದಾಗಿದ್ದು, ಕೀಟನಾಶಕ ಕಂಪನಿಯೊಂದರ ಮೋಸದಾಟದಿಂದ ಅದು ಹೇಗೆ ಒಂದು ರೈತ ಕುಟುಂಬವೇ ನಾಶವಾಗುತ್ತೆ ಎಂಬುದರ ಸುತ್ತ ಹೆಣೆದ ಕಥೆ ಇದಾಗಿದೆ.

ಸ್ಥಳೀಯ ಕೀಟನಾಶಕ ಮಾರಾಟಗಾರರನ್ನು ತಮ್ಮ ವಂಚನೆಯ ಆಟಕ್ಕೆ ಬೀಳಿಸಿಕೊಂಡು, ಅದು ಹೇಗೆ ಹತ್ತಿ ಮತ್ತು ತೊಗರಿ ಬೆಳೆಯುವ ರೈತರಿಗೆ ಹಿಲಿಯೋಥಿಸ್ ಎಂಬ ಬತ್ತದ ಕೀಟನಾಶ 'ಕವನ್ನು ಮೋಸದಿಂದ ಮಾರುತ್ತಾರೆ ಮತ್ತು ಆ ಮೂಲಕ ಅವರನ್ನು ನಷ್ಟ ಹಾಗೂ ಸಾಲದ ಸುಳಿಗೆ ಸಿಲುಕಿಸುತ್ತಾರೆ ಮತ್ತು ತಾವು ಹೇಗೆ ಕೋಟ್ಯಂತರ ರೂಪಾಯಿ ಲಾಭ ಮಾಡಿಕೊಳ್ಳುತ್ತಾರೆ ಎಂಬ ಕಥಾ ಹಂದರವನ್ನು ಹೊಂದಿರುವ ನಾಟಕ, ರೈತರ ಬದುಕು ಮತ್ತು ಬವಣೆಯನ್ನು ವೇದಿಕೆಯ ಮೇಲೆ ಕಟ್ಟಿಕೊಡುವ ಮೂಲಕ ಪ್ರೇಕ್ಷಕರ ಮನಸೂರೆಗೊಂಡಿತು.

ಲಕ್ಷ್ಮಣ ಮಂಡಲಗೇರ ಅವರ ನಿರ್ದೇಶನ, ನಾಗರಾಜ್ ಸಿರವಾರ ಅವರ ರಂಗಸಜ್ಜಿಕೆ, ವೆಂಕಟನರಸಿಂಹಲು ಅವರ ಪ್ರಸಾದನ ಮತ್ತು ಡಿ.ಹೇಮಂತ ಮರಿಯಮ್ಮನಹಳ್ಳಿ ಹಾಗೂ ಹನುಮಯ್ಯ ಅವರ ಸಂಗೀತದೊಂದಿಗೆ ನಾಟಕ ಮೂಡಿಬಂದಿದೆ. ನಾಟಕ ಪ್ರದರ್ಶನ ಕಾರ್ಯಕ್ರಮದಲ್ಲಿ ಕೇಂದ್ರ ಸಾಹಿತ್ಯ ಅಕಾಡೆಮಿಯ ಸದಸ್ಯರಾದ ಚಿದಾನಂದ ಸಾಲಿ, ರಾಯಚೂರು ಜಿಲ್ಲಾ ಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷರು ಹಾಗೂ ಹಿರಿಯ ಸಾಹಿತಿಗಳಾದ ಮಹಾಂತೇಶ್ ಮಸ್ಕಿ, ಹಿರಿಯ ಸಾಹಿತಿಗಳು ವೀರ ಹನುಮಾನ್, ಬಂಡಾಯ ಸಾಹಿತಿಗಳಾದ ಬಾಬು ಭಂಡಾರಿಗಲ್, ಭಗತ್ ರಾಜ್ ನಿಜಾಮಕರ, ಪತ್ರಕರ್ತರು ಹಾಗೂ ಪತ್ರಿಕೋದ್ಯಮ ಅಧ್ಯಾಪಕರಾದ ವಿಜಯ್ ಸರೋದೆ ಸೇರಿದಂತೆ ಅನೇಕರು ಭಾಗವಹಿಸಿದ್ದರು.

# ಎರಡನೇ ಬೆಳೆಗೆ ನೀರು ಸರಬರಾಜು ಮಾಡದಿದ್ದರೆ ಪ್ರತಿಭಟನೆ ಅನಿವಾರ್ಯ



**ಸಿರುಗುಪ್ಪ, ನ.04–** ನಗರದ ಪ್ರವಾಸಿ ಮಂದಿರದಲ್ಲಿ ಮಾಜಿ ಶಾಸಕ ಎಂ.ಎಸ್.ಸೋಮಲಿಂಗಪ್ಪ ನೇತೃತ್ವದಲ್ಲಿ ಎರಡನೇ ಬೆಳೆಗೆ ನೀರು ಸರಬರಾಜು ಮಾಡುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸಲು ಪೂರ್ವ ಭಾವಿ ಸಭೆ ನಡೆಯಿತು.

ತಾಲ್ಲೂಕಿನಲ್ಲಿ ರೈತರ ಪರ ಹೋರಾಟ ನಡೆಸುವ ಸಂಘಟನೆಗಳು ಇಲ್ಲವಾಗಿದೆ. ಅಕಾಲಿಕ ಮಳೆಯಿಂದಾಗಿ ಇಳುವರಿ ಕಡಿಮೆಯಾಗಿ ರೈತರು ನಷ್ಟ ಅನುಭವಿಸುವಂತಾಗಿದೆ. ಸರ್ಕಾರ ಪರಿಹಾರವನ್ನು ಒದಗಿಸಬೇಕು. ಮಳೆಯಿಂದಾಗಿ ಬೆಳೆಯಲ್ಲಿ ಇಳುವರಿ ಕುಂಟಿತವಾಗಿ ಬೆಳೆಗೆ ಮಾಡಿದ ಸಾಲ ಹೊರೆಯಾಗಿದೆ. ಬೇಸಿಗೆ ಬೆಳೆಗೆ ನೀರಿಲ್ಲ ಅಂದರೆ ರೈತರು ಸಾಲದಲ್ಲಿ ಸಾಯಬೇಕಾಗುತ್ತದೆ ಎಂದರು.

ತುಂಗಭದ್ರಾ ಅಣೆಕಟ್ಟನಲ್ಲಿ ಎರಡನೇ ಬೆಳೆಗೆ ಆಗುವಷ್ಟು ನೀರು ಲಭ್ಯವಿದ್ದರೂ ಸರ್ಕಾರ ನಿರ್ಲಕ್ಷ್ಯ ತೋರುತ್ತಿದೆ.

ಕನ್ನಯ್ಯ ನಾಯ್ಡು ಹೇಳುವಂತೆ ಅಣೆಕಟ್ಟನಲ್ಲಿ 80 ಟಿ.ಎಂ.ಸಿ ನೀರು ಲಭ್ಯವಿದ್ದು, ಎರಡನೇ ಬೆಳೆಗೆ ಮೂರು ತಿಂಗಳವರೆಗೆ ನೀರು ಸರಬರಾಜು ಮಾಡಬಹುದು ಎಂದು ಅಭಿಪ್ರಾಯಿಸಿದರು.

ಸಚಿವರು ಕ್ರಸ್ಟ್‌ಗೇಟ್ ಅಳವಡಿಸುವ ಸಲುವಾಗಿ ಎರಡನೇ ಬೆಳೆಗೆ ನೀರು ಬಿಡುವುದಿಲ್ಲ ಎಂದು ಹೇಳುವುದು ಸರಿಯಲ್ಲ ಎಂದರು. ಗಾಳಿ ಮಳೆಗೆ ನೆಲಕ್ಕಚ್ಚಿದ ಭತ್ತದ ಬೆಳೆಗಳನ್ನು ಅಧಿಕಾರಿಗಳು ಬೇಗ ಸರ್ವೇ ಮಾಡಿ ರೈತರಿಗೆ ಪರಿಹಾರ ಪಡೆಯಲು ಅನುಕೂಲ ಮಾಡಿಕೊಡಬೇಕೆಂದರು.

ಒಂದು ವೇಳೆ ಎರಡನೇ ಬೆಳೆಗೆ ನೀರು ಸರಬರಾಜು ಮಾಡದೇ ಇದ್ದರೆ ಪ್ರಗತಿಪರ ರೈತ ಮೃತ್ಯುಂಜಯ ಅವರ ಮುಂದಾಳತ್ವದಲ್ಲಿ ಹೋರಾಟ ಮಾಡಿ ಸಿರುಗುಪ್ಪ, ಇಬ್ರಾಂಪುರ, ಸಿರಿಗೇರಿ, ತೆಕ್ಕಲಕೋಟೆಯಲ್ಲಿ ರಸ್ತೆ ಬಂದ್ ಮಾಡಿ ಹೋರಾಟ ನಡೆಸುತ್ತೇವೆ ಎಂದರು. ಅಕ್ಕಿಗಿರಿಣಿ ಮಾಲೀಕರ ಸಂಘ, ಕಿರಾಣಿ ಅಂಗಡಿಗಳ ಮಾಲೀಕರು, ಬಟ್ಟೆ ಅಂಗಡಿಗಳ ಮಾಲೀಕರು, ಬಂಗಾರದ ಅಂಗಡಿ ಮಾಲೀಕರು ಬೆಂಬಲವನ್ನು ವ್ಯಕ್ತ ಪಡಿಸಿದರು.ಬಿಜೆಪಿ ತಾಲೂಕು ಅಧ್ಯಕ್ಷ ಕೆ.ಮಲ್ಲಿಕಾರ್ಜುನ, ಮುಖಂಡರಾದ ಚಾಗಿಸುಬ್ಬಯ್ಯ, ಆರ್.ಬಸವಲಿಂಗಪ್ಪ, ಮಾಣಿಕ್ಯ ರೆಡ್ಡಿ, ಆರ್.ಸದಾ ಶಿವ ಸೇರಿದಂತೆ ವಿವಿಧ ಭಾಗದ ರೈತರು ಇದ್ದರು.

# ಕಾಲು ಬಾಯಿ ಜ್ವರ ಲಸಿಕಾಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಚಾಲನೆ



**ಬೀದರ,ನ.4–**ಜಿಲ್ಲೆಯಾದ್ಯಂತ ರೈತರ ಮನೆ ಬಾಗಿಲಿಗೆ ಲಸಿಕೆದಾರರು ಆಗಮಿಸಿ ದನ, ಎಮ್ಮೆಗಳಿಗೆ ಎಫ್‌ಎಂಡಿ ಲಸಿಕೆಯನ್ನು ಉಚಿತವಾಗಿ ನೀಡುತ್ತಾರೆ. ರೈತಬಾಂಧವರು ತಮ್ಮ ಎಲ್ಲ ಜಾನುವಾರುಗಳಿಗೆ ತಪ್ಪದೇ ಲಸಿಕೆಯನ್ನು ಹಾಕಿಸಿಕೊಂಡು ರೋಗವನ್ನು ತಡೆಗಟ್ಟಲು ಮತ್ತು ಎಫ್‌ಎಂಡಿಸಿಪಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದರು.

ಅವರು ಸೋಮವಾರ ರಾಷ್ಟ್ರೀಯ ಜಾನುವಾರು ನಿಯಂತ್ರಣ ಕಾರ್ಯಕ್ರಮದಡಿ ಬೀದರನ ಲಕ್ಷ್ಮೀಸತ್ಯನಾರಾಯಣ ಗೋಶಾಲೆಯ ಆವರಣದಲ್ಲಿ ಹಮ್ಮಿಕೊಂಡಿದ್ದ 8ನೇ ಸುತ್ತಿನ ಕಾಲು ಬಾಯಿ ಜ್ವರ ಲಸಿಕಾ ಕಾರ್ಯಕ್ರಮದಲ್ಲಿ ಗೋಮಾತೆಗೆ ಪೂಜೆ ಸಲ್ಲಿಸಿ, ಲಸಿಕೆ ಹಾಕುವುದರ ಮೂಲಕ ಉದ್ಘಾಟಿಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಬೀದರ ಪಶು ಪಾಲನಾ ಇಲಾಖೆಯ ಉಪನಿರ್ದೇಶಕರಾದ ಡಾ. ನರಸಪ್ಪ ಎ.ಡಿ. ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಪಶು ಪಾಲನಾ ಇಲಾಖೆಯ ಡಾ. ಯೋಗೇಂದ್ರ ಕುಲಕರ್ಣಿ, ಡಾ. ಶೇಶಪ್ಪಾ, ಡಾ. ಓಂಕಾರ ಪಾಟೀಲ್, ಡಾ. ನೀಲಕಂಠ, ಡಾ. ಶ್ರೀಕಾಂತ ಬಿರಾದಾರ, ಡಾ. ರವಿಕಾಂತ ಕೊಟಗೆ, ಡಾ. ಮೋಸಿನ್, ಡಾ. ಆದಿತ್ಯ, ಡಾ. ಜಕಿಉದ್ದೀನ್ ಡಾ. ಮಿರ್ಜಾ, ಡಾ. ಸಂಗೀತಾ, ಡಾ. ಸುಧಾರಾಣಿ ಡಾ. ಮುಜೀಬ ಡಾ. ಸೋಮಶೇಖರ, ಪ್ರಭಾಕರ ಮೈಲಾರ, ಅಧ್ಯಕ್ಷರು ಗೋಶಾಲೆ ಹೆಡೆ ಕಾರ್ಯದರ್ಶಿಗಳು, ಇಲಾಖೆಯ ಸಿಬ್ಬಂದಿಗಳಾದ ಸುನೀಲ್‌ಕುಮಾರ, ಇಲಿಯಾಸ್, ಸುಜಾತಾ, ಜಗನ್ನಾಥ ವಿಠಲ್, ಅಣ್ಣಾರಾವ್ ಸೇರಿದಂತೆ ಇತರರು ಉಪಸ್ಥಿತರಿದ್ದರು. ಕಾರ್ಯಕ್ರಮ ನಿರೂಪಣೆ ಡಾ. ಜಗದೀಶ ನಿರ್ವಹಿಸಿರುತ್ತಾರೆ.

# ಮಕ್ಕಳು ಹೆಚ್ಚಾಗಿ ಕನ್ನಡ ಪುಸ್ತಕ ಓದುವ ಹವ್ಯಾಸ ರೂಢಿಸಿಕೊಳ್ಳಲಿ: ಭಾರತಿ ವಸ್ತ್ರದ್

**ಬೀದರ್ ನ.04–** ಇಂದಿನ ಪೀಳಿಗೆಯ ಮಕ್ಕಳು ಕನ್ನಡ ಭಾಷೆಯ ಪುಸ್ತಕಗಳನ್ನು ಓದುವ ಹವ್ಯಾಸ ಬೆಳೆಸಿಕೊಳ್ಳುವುದು ಅತ್ಯಂತ ಅಗತ್ಯವಾಗಿದೆ. ಮೊಬೈಲ್ ಮತ್ತು ಟಿ.ವಿಯು ಮಕ್ಕಳ ಜೀವನದ ಭಾಗವಾಗಿಬಿಟ್ಟಿದೆ. ಆದರೆ ಇದರ ಅತಿಯಾದ ಬಳಕೆಯಿಂದ ಮಕ್ಕಳು ಓದಿನ ಆಸಕ್ತಿ ಕಳೆದುಕೊಳ್ಳುತ್ತಿದ್ದಾರೆ. ಅನಾವಶ್ಯಕವಾಗಿ ಮೊಬೈಲ್‌ನಲ್ಲಿ ಸಮಯ ವ್ಯರ್ಥ ಮಾಡದೆ, ಆ ಸಮಯವನ್ನು ಕನ್ನಡ ಪುಸ್ತಕ ಓದುವುದರಲ್ಲಿ ಕಳೆಯಬೇಕು ಎಂದು ಕರ್ನಾಟಕ ಲೇಖಕೀಯರ ಸಂಘದ ಜಿಲ್ಲಾ ಅಧ್ಯಕ್ಷೆ ಭಾರತಿ ವಸ್ತ್ರದ ಅವರು ಕಿವಿ ಮಾತು ಹೇಳಿದರು.

ಅವರು ರವಿವಾರ ಬೀದರ್ ನಗರದ ಪುಜ್ಯ ಶ್ರೀ ಚನ್ನಬಸವ ಪಟ್ಟದೇವರ ಜಿಲ್ಲಾ ರಂಗಮಂದಿರದಲ್ಲಿ ಅತಿವಾಳೆ ಸಾಂಸ್ಕೃತಿಕ ಪ್ರತಿಷ್ಠಾನ ಬೀದರ್ ವತಿಯಿಂದ ಏರ್ಪಡಿಸಿದ ಕನ್ನಡ ರಾಜ್ಯೋತ್ಸವ ನಿಮಿತ್ಯ ಉಪನ್ಯಾಸ–ಸನ್ಮಾನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮವನ್ನು ಕನ್ನಡಾಂಬೆಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.ಪುಸ್ತಕ ಓದುವ ಹವ್ಯಾಸವು ಮಕ್ಕಳಲ್ಲಿ ಚಿಂತನಾ ಶಕ್ತಿ, ಕಲ್ಪನಾ ಶಕ್ತಿ ಮತ್ತು ಸೃಜನಾತ್ಮಕತೆ ಬೆಳೆಯಲು




ನೆರವಾಗುತ್ತದೆ. ಕನ್ನಡ ಪುಸ್ತಕಗಳ ಓದಿನ ಮೂಲಕ ಮಕ್ಕಳು ನಮ್ಮ ಭಾಷೆಯ ಸೌಂದರ್ಯ, ಸಾಹಿತ್ಯದ ವೈಭವ ಮತ್ತು ಸಂಸ್ಕೃತಿಯ ಗೌರವವನ್ನು ಅರಿಯಬಹುದು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅತಿವಾಳೆ ಸಾಂಸ್ಕೃತಿಕ ಪ್ರತಿಷ್ಠಾನದ ಅಧ್ಯಕ್ಷರಾದ ಸಂಜೀವಕುಮಾರ ಅತಿವಾಳೆ ಅವರು, ನಮ್ಮ ಗಡಿನಾಡಿನಲ್ಲಿ ಕನ್ನಡದ ಕೀರ್ತಿ ಉಳಿಸಿ ಬೆಳೆಸಲು ಹತೋಟಿ ಬಿಟ್ಟು ದುಡಿಯುತ್ತಿರುವ ಕನ್ನಡ ಮನಸ್ಸುಗಳಿಗೆ ಗೌರವ ನೀಡುವುದು ಹಾಗೂ ಅವರನ್ನು ಗುರುತಿಸುವುದು ನಮ್ಮ ಪ್ರತಿಷ್ಠಾನದ ಪ್ರಮುಖ ಉದ್ದೇಶವಾಗಿದೆ ಎಂದು ಹೇಳಿದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111,9743496111

# ವಿಜಯಪುರ ಜಿಲ್ಲೆಯಲ್ಲಿ 2.9 ತೀವ್ರತೆಯ ಲಘು ಭೂಕಂಪ

**ವಿಜಯಪುರ,ನ.4–** ವಿಜಯಪುರ ಜಿಲ್ಲೆಯಲ್ಲಿ ಇಂದು ರಿಕ್ಟರ್ ಮಾಪಕದಲ್ಲಿ 2.9 ತೀವ್ರತೆಯ ಲಘು ಭೂಕಂಪ ದಾಖಲಾಗಿದೆ ಎಂದು ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಮೇಲ್ವಿಚಾರಣಾ ಕೇಂದ್ರ (ಕೆಎಸ್‌ಎನ್‌ಡಿಎಂಸಿ) ತಿಳಿಸಿದೆ.

ವಿಜಯಪುರ ತಾಲ್ಲೂಕಿನ ಭೂಟ್ನಾಳ ತಾಂಡಾದಿಂದ ವಾಯುವ್ಯಕ್ಕೆ ಸುಮಾರು 3.6 ಕಿಲೋಮೀಟರ್ ದೂರದಲ್ಲಿ ಭೂಕಂಪದ ಕೇಂದ್ರಬಿಂದುವಿದ್ದು, ಬೆಳಿಗ್ಗೆ 7.49 ಕ್ಕೆ ಭೂಕಂಪ ಸಂಭವಿಸಿದೆ.

ಭೂಕಂಪನವು ಅಲ್ಪ ಪ್ರಮಾಣದಲ್ಲಿದ್ದು ಯಾವುದೇ ಹಾನಿಯಾಗಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ.ಕೇಂದ್ರದ ವಿಶ್ಲೆ?ಷಣೆಯ ಪ್ರಕಾರ, ಭೂಕಂಪದ ಕೇಂದ್ರಬಿಂದುವು ಇಂಗನಾಲ್ ಗ್ರಾಮದಿಂದ ಪಶ್ಚಿಮ–ನೈಋತ್ಯಕ್ಕೆ 4.3 ಕಿ.ಮೀ, ಹಂಚಿನಾಲ್ ಗ್ರಾಮದಿಂದ ಈಶಾನ್ಯಕ್ಕೆ 4.6 ಕಿ.ಮೀ, ವಿಜಯಪುರ ನಗರದಿಂದ ಈಶಾನ್ಯಕ್ಕೆ 9.3 ಕಿ.ಮೀ ಮತ್ತು ಆಲಮಟ್ಟಿ ಅಣೆಕಟ್ಟು ಭೂಕಂಪ ವೀಕ್ಷಣಾಲಯದಿಂದ ಸುಮಾರು 65 ಕಿ.ಮೀ ಉತ್ತರದಲ್ಲಿದೆ.ಭೂಮಿಯಿಂದ 5 ಕಿ.ಕಿಮಿ ಕಳೆಗೆ ಕಂಪನವಾಗಿದೆ.

ತೀವ್ರತೆ ಕಡಿಮೆಯಾಗಿದ್ದು, ಭೂಕಂಪದ ಕೇಂದ್ರಬಿಂದುದಿಂದ 50–60 ಕಿ.ಮೀ ರೇಡಿಯಲ್ ದೂರದವರೆಗೆ ಅನುಭವಿಸಬಹುದು ಎಂದು ಕೆಎಸ್‌ಎನ್‌ಡಿಎಂಸಿ ಸ್ಪಷ್ಟಪಡಿಸಿದೆ.

ಅಂತಹ ಭೂಕಂಪವು ಸ್ಥಳೀಯ ಸಮುದಾಯಕ್ಕೆ ಯಾವುದೇ ಹಾನಿ ಉಂಟುಮಾಡುವುದಿಲ್ಲ ಏಕೆಂದರೆ ಗಮನಿಸಿದ ತೀವ್ರತೆ ಕಡಿಮೆಯಾಗಿದೆ, ಆದರೂ ಸ್ಥಳೀಯ ಕಂಪನಗಳು ಅನುಭವಿಸ 'ಬಹುದು ಎಂದು ಅದು ಹೇಳಿದೆ. ಜನರು ಮನೆಯಿಂದ ಹೊರಗೆ ಬಂದು ಆತಂಕ ವ್ಯಕ್ತಪಡಿಸಿದ ಘಟನೆಯೂ ನಡೆದಿದೆ.

ತಿಕೋಟ, ಕಳ್ಳಕವಟಗಿ, ತೊರವಿ, ಶಿವಗಿರಿ, ಹೊನ್ನೂಟಗಿ ಸೇರಿದಂತೆ ವಿಜಯಪುರ, ತಿಕೋಟ ತಾಲೂಕುಗಳಲ್ಲಿ ಭೂಕಂಪನದ ಅನುಭವ ಆಗಿದೆ. ಜಿಲ್ಲೆಯಲ್ಲಿ ಕಳೆದ 2 ತಿಂಗಳಲ್ಲಿ 13 ಬಾರಿ ಭೂಮಿ ಕಂಪಿಸಿದ ಅನುಭವ ಆಗಿದೆ ಸರಣಿ ಭೂಕಂಪನದಿಂದ ಜನರು ಭೀತಿಗೊಂಡಿದ್ದಾರೆ.

# ಕಿರುತೆರೆ ನಟಿಗೆ ಲೈಂಗಿಕ ಕಿರುಕುಳ ಡೆಲಿವರಿ ಮ್ಯಾನೇಜರ್ ಸೆರೆ



**ಬೆಂಗಳೂರು, ನ.4–**ಕಿರುತೆರೆಗೆ ಗುಪ್ತಾಂಗದ ಫೋಟೋ ಕಳುಹಿಸಿ ಲೈಂಗಿಕ ಕಿರುಕುಳ ನೀಡಿದ ಕಾಮುಕ ಖಾಸಗಿ ಕಂಪನಿಯ ಡೆಲವರಿ ಮ್ಯಾನೇಜರ್ ನನ್ನು ಅನ್ನಪೂರ್ಣೇಶ್ವರಿ ನಗರ ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ವೈಟ್ ಫೀಲ್ಡ್ ನ ಖಾಸಗಿ ಕಂಪನಿಯ ಡೆಲವರಿ ಮ್ಯಾನೇಜರ್ ನವೀನ್ ಕೆ ಮಾನ್ ಬಂಧಿತ ಆರೋಪಿಯಾಗಿದ್ದಾನೆ. ಆತನನ್ನು ತೀವ್ರ ವಿಚಾರಣೆ ನಡೆಸಲಾಗಿದೆ ಎಂದು ಪಶ್ಚಿಮ ವಿಭಾಗದ ಡಿಸಿಪಿ ಗಿರೀಶ್ ತಿಳಿಸಿದ್ದಾರೆ.

ಫೇಸ್‌ಬುಕ್‌ನಲ್ಲಿ ಗುಪ್ತಾಂಗದ ವಿಡಿಯೋ ಕಳಿಸಿ ನಟಿಗೆ ಆರೋಪಿಯು ಕಿರುಕುಳ ನೀಡಿದ್ದಾನೆ. ತೆಲುಗು ಹಾಗೂ ಕನ್ನಡ ಧಾರವಾಹಿಗಳಲ್ಲಿ ಸಂತ್ರಸ್ತೆ ನಟಿಸಿದ್ದು, ಆರೋಪಿ ಕಳೆದ 3 ತಿಂಗಳಿನಿಂದ ನಟಿಗೆ ಲೈಂಗಿಕ ಕಿರುಕುಳ ನೀಡುತ್ತಿದ್ದಾನೆ.

**ಫೇಸ್‌ಬುಕ್‌ನಲ್ಲಿ ರಿಕ್ವೆಸ್ಟ್:**ಆರೋಪಿ ಮೊದಲು ಫೇಸ್‌ಬುಕ್‌ನಲ್ಲಿ ಓಂಗಿಇಇಓಚ ಎಂಬ ಖಾತೆಯಿಂದ ಫ್ರೆಂಡ್ ರಿಕ್ವೆಸ್ಟ್ ಕಳಿಸಿದ್ದಾನೆ. ನಟಿ ರಿಕ್ವೆಸ್ಟ್ ಸ್ವೀಕರಿಸದ ಹಿನ್ನೆಲೆ ಮೆಸೆಂಜರ್‌ನಲ್ಲಿ ಮೆಸೇಜ್ ಮಾಡಿದ್ದಾನೆ. ಕಳೆದ ಮೂರು ತಿಂಗಳಿನಿಂದ ನಿರಂತರವಾಗಿ ಲೈಂಗಿಕ ಕಿರುಕುಳ ನೀಡುತ್ತಿದ್ದಾನೆ ಎಂದು ನಟಿ ದೂರಿನಲ್ಲಿ ತಿಳಿಸಿದ್ದಾರೆ.

ನಟಿ ಮೆಸೇಜ್ ಮಾಡದಂತೆ ಆರೋಪಿಗೆ ಎಚ್ಚರಿಕೆ ನೀಡಿದ್ದರು. ಆದ್ರೂ ಕಿರುಕುಳ ಹೆಚ್ಚಾಗ್ತಿದ್ದ ಹಿನ್ನೆಲೆ ಆತನ ಅಕೌಂಟ್ ಬ್ಲಾಕ್ ಮಾಡಿದ್ದರು ನಟಿ. ಬಳಿಕ ಬೇರೆ ಐಡಿಯಿಂದ ಅಶ್ಲೀಲ ಮೆಸೇಜ್ ಕಳಿಸಿದ್ದ, ಗುಪ್ತಾಂಗದ ವಿಡಿಯೋ ಕಳಿಸಿ ವಿಕೃತಿ ಮೆರೆಯುತ್ತಿದ್ದ. ಆದ್ರೂ ತಾಳ್ಮೆ ಕಳೆದುಕೊಳ್ಳದ ನಟಿ ಇದೇ ನವೆಂಬರ್ 1ರಂದು ನಾಗರಭಾವಿಯ ನಂದನ್ ಪ್ಯಾಲೆಸ್ ಬಳಿ ಆರೋಪಿಯನ್ನ ಭೇಟಿ ಮಾಡಿ ಬುದ್ಧಿ ಮಾತು ಹೇಳಿದ್ದರು.

**ಬುದ್ಧಿ ಕೇಳದ ಕಾಮುಕ:**ಈ ರೀತಿ ಮೆಸೇಜ್ ಮಾಡಬಾರದು ಅಂತ ಕಿವಿಮಾತು ಹೇಳಿದರೂ ಬುದ್ಧಿ ಕೇಳದ ಆರೋಪಿ ಮತ್ತೆ ಅಶ್ಲೀಲ ಮೆಸೇಜ್ ಮಾಡುವುದನ್ನು ಮುಂದುವರೆಸಿದ್ದು, ಇದರಿಂದ ನೊಂದು ಅನ್ನಪೂರ್ಣೇಶ್ವರಿ ನಗರ ಪೊಲೀಸ್ ಠಾಣೆಗೆ ನಟಿ ದೂರು ನೀಡಿದ್ದರು.ನಟಿಯ ದೂರಿನ ಆಧಾರದ ಮೇಲೆ ಕೇಸ್ ದಾಖಲಿಸಿಕೊಂಡಿದ್ದ ಪೊಲೀಸರು ಆರೋಪಿಯನ್ನ ಬಂಧಿಸಿ ಜೈಲಿಗಟ್ಟಿದ್ದಾರೆ.

# ರೈತರ ಸಂಕಷ್ಟಕ್ಕೆ ಸ್ಪಂದಿಸದ ಸರ್ಕಾರ : ಬಿವೈವಿ ಟೀಕೆ



**ಬೆಳಗಾವಿ:ನ.4–** ಭಾರಿ ಮಳೆಯಿಂದ ಸಂಕಷ್ಟಕ್ಕೆ ಸಿಲುಕಿದ ರೈತರು ಪರಿಹಾರಕ್ಕೆ ಒತ್ತಾಯಿಸಿದ್ದರು. ಜಿಲ್ಲಾ ಉಸ್ತುವಾರಿ ಸಚಿವರು ತಲೆ ಕೆಡಿಸಿಕೊಂಡಿಲ್ಲ; ಇಲಾಖೆಯ ಅಧಿಕಾರಿಗಳೂ ತಲೆ ಕೆಡಿಸಿಕೊಂಡಿಲ್ಲ; ಕಂದಾಯ, ಕೃಷಿ ಸಚಿವರು ಉತ್ತರ ಕರ್ನಾಟಕದ ಪ್ರವಾಸ ಮಾಡಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಆಕ್ಷೇಪಿಸಿದ್ದಾರೆ.

ಬೆಳಗಾವಿಯಲ್ಲಿ ಸುದ್ದಿಗಾರರ ಜೊತೆ ಜೊತೆ ಮಾತನಾಡಿದ ಅವರು, ಬೆಳಗಾವಿ, ಬಾಗಲಕೋಟೆ, ಬಿಜಾಪುರ ಜಿಲ್ಲೆ ಸೇರಿ ಈ ಭಾಗದ ಕಬ್ಬು ಬೆಳೆಗಾರರು ಹೋರಾಟ, ಪ್ರತಿಭಟನೆ ಮಾಡುತ್ತಿದ್ದಾರೆ. ಅವರ ನ್ಯಾಯಯುತ ಬೇಡಿಕೆಗಳನ್ನು ರಾಜ್ಯ ಸರಕಾರವು ತನ್ನ ಮುಂದಾಳತ್ವದಲ್ಲಿ ಈಡೇರಿಸಬೇಕೆಂದು ಒತ್ತಾಯಿಸುತ್ತಿದ್ದಾರೆ ಎಂದು ಗಮನ ಸೆಳೆದರು. ರಾಜ್ಯ ಸರಕಾರವು ರೈತರ ಬಗ್ಗೆ ನಿರ್ಲಕ್ಷ್ಯ ವಹಿಸುತ್ತಿದ್ದು, ನಾವು ರೈತರ ಪರವಾಗಿ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು.

6 ಮಿಲಿಯನ್ ಟನ್ ಕಬ್ಬು ಅರೆಯುತ್ತಿದ್ದು, ಮೊಲಾಸೆಸ್, ಎಥೆನಾಲ್ ಮೊದಲಾದವುಗಳಿಂದ ರಾಜ್ಯ ಸರಕಾರಕ್ಕೆ ತೆರಿಗೆ ಮೂಲಕ ಸುಮಾರು 50– 55 ಸಾವಿರ ಕೋಟಿ ಆದಾಯ ಬರುತ್ತದೆ. ರಾಜ್ಯ ಸರಕಾರದ ಕರ್ತವ್ಯವೂ ಇರುತ್ತದೆಯಲ್ಲವೇ? ಸರಕಾರವು ಸಂಕಷ್ಟದಲ್ಲಿರುವ ರೈತರ ಸಮಸ್ಯೆ ಆಲಿಸುತ್ತಿಲ್ಲ. ಈ ಕಾಂಗ್ರೆಸ್ ರೈತರು, ಕಬ್ಬು ಬೆಳೆಗಾರರ ಬಗ್ಗೆ ಎಷ್ಟು ಕಾಳಜಿ ಇದೆ ಎಂದು ರೈತರು ಪ್ರಶ್ನಿಸುತ್ತಿದ್ದಾರೆ ಎಂದರು.

ಸಾವಿರಾರು ರೈತರು ಪ್ರತಿಭಟನೆ ನಡೆಸುತ್ತಿದ್ದಾರೆ. ಸರಕಾರವು ತನ್ನ ಜವಾಬ್ದಾರಿ ಅರಿತು ನಡೆದುಕೊಳ್ಳಬೇಕು ಎಂದು ಆಗ್ರಹಿಸಿದರು. ರಾಜ್ಯ ಸರಕಾರವು ತನ್ನ ಜವಾಬ್ದಾರಿಯನ್ನು ಅರಿತು ಸ್ಪಂದಿಸಿಲ್ಲ; ವಿಪಕ್ಷವಾಗಿ ನಾವು ಹೊಣೆಯರಿತು ಕೆಲಸ ಮಾಡುತ್ತಿದ್ದೇವೆ. ನಾಡಿಗೆ ಅನ್ನ ನೀಡುವ ರೈತರ ವಿಚಾರ ಬಂದಾಗ ಪಕ್ಷಾತೀತವಾಗಿ ನಾವು ರೈತರ ಪರವಾಗಿ ನಿಲ್ಲಬೇಕಾಗುತ್ತದೆ. ಹಾಗಾಗಿ ನಾನು, ನಮ್ಮ ಪಕ್ಷದ ಮುಖಂಡರ ಜೊತೆ ಚರ್ಚೆ ಮಾಡಿ ರೈತರ ಪ್ರತಿಭಟನೆಗೆ ಬೆಂಬಲ ನೀಡಲು ಇಲ್ಲಿ ಬಂದಿದ್ದೇನೆ ಎಂದು ತಿಳಿಸಿದರು.

2014ರಲ್ಲಿ ಬೆಳಗಾವಿ ಚಳಿಗಾಲದ ಅಧಿವೇಶನ ನಡೆಯುತ್ತಿದ್ದಾಗ ರೈತ ವಿಠಲ ಅರಬಾವಿ ಅವರು ಕಬ್ಬಿನ ದರದ ವಿಚಾರದಲ್ಲಿ ಪ್ರಾಣ ಕಳಕೊಂಡರು. ಯಡಿಯೂರಪ್ಪ ಅವರೂ ಬೀದಿಗಿಳಿದು ಹೋರಾಟ ಮಾಡಿ ಅಂದಿನ ಮುಖ್ಯಮಂತ್ರಿಗಳಿಗೆ 150 ರೂ. ಹೆಚ್ಚುವರಿ ದರಕ್ಕೆ ಒತ್ತಾಯ ಮಾಡಿದ್ದರು. ಅವರ ಹೋರಾಟ ಆಗ ಯಶಸ್ವಿ ಆಗಿತ್ತು ಎಂದು ನೆನಪಿಸಿದರು.

**ಸಿಎಂ ಕುರ್ಚಿಗೆ ಯುದ್ಧ**..ಇನ್ನೊಂದು ಪ್ರಶ್ನೆಗೆ ಉತ್ತರಿಸಿದ ಅವರು, ಮುಖ್ಯಮಂತ್ರಿ ಕುರ್ಚಿಗೆ ಕಳೆದ ಕೆಲವು ದಿನಗಳಿಂದ ಯುದ್ಧ ಪ್ರಾರಂಭವಾಗಿದೆ. ಅದು ಯಾವ ಮಟ್ಟಕ್ಕೆ ಹೋಗಲಿದೆ ಎಂಬುದು ಬಿಹಾರ ಚುನಾವಣೆ ಫಲಿತಾಂಶದ ಬಳಿಕ ಅದು ಗೊತ್ತಾಗಲಿದೆ ಎಂದು ಬಿ.ವೈ.ವಿಜಯೇಂದ್ರ ಅವರು ತಿಳಿಸಿದರು.

ನಾಡಿನ ರೈತರು ಇವತ್ತು ಸಂಕಷ್ಟದಲ್ಲಿದ್ದಾರೆ. ಅತಿವೃಷ್ಟಿ ಸಂದರ್ಭದಲ್ಲಿ ನಾನು ಕಲ್ಯಾಣ ಕರ್ನಾಟಕ ಭಾಗದಲ್ಲಿ ಪ್ರವಾಸ ಮಾಡಿದ್ದೇನೆ. ಗುಲ್ಬರ್ಗ, ಯಾದಗಿರಿ, ರಾಯಚೂರು– ಈ ಭಾಗದಲ್ಲಿ ನಮ್ಮ ವಿಪಕ್ಷ ನಾಯಕರೂ ಪ್ರವಾಸ ಮಾಡಿದ್ದಾರೆ ಎಂದು ಗಮನಕ್ಕೆ ತಂದರು. ಪ್ರಶ್ನೆಗೆ ಉತ್ತರಿಸಿದ ಅವರು, ರಾಜ್ಯ ಸರಕಾರವು ಕೂಡಲೇ ರೈತರ ಸಮಸ್ಯೆಗೆ ಸ್ಪಂದಿಸಬೇಕಿದೆ ಎಂದು ಒತ್ತಾಯಿಸಿದರು.

# ಚಳಿಗಾಲ ಅಧಿವೇಶನ ವೇಳೆಗೆ ಹೊಸ ಸಿಎಂ ಬರ್ತಾರೆ : ಶ್ರೀರಾಮುಲು ಭವಿಷ್ಯ



**ಗದಗ,ನ.4–** ಮುಂದಿನ ಬೆಳಗಾವಿ ಚಳಿಗಾಲ ಅಧಿವೇಶನ ವೇಳೆಗೆ ಹೊಸ ಸಿಎಂ ಬರುತ್ತಾರೆ ಎಂದು ಮಾಜಿ ಸಚಿವ ಬಿ. ಶ್ರೀ?ರಾಮುಲು ಭವಿಷ್ಯ ನುಡಿದಿದ್ದಾರೆ.ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಬೆಳಗಾವಿ ಅಧಿವೇಶನದಲ್ಲಿ ಹೊಸ ಸಿಎಂ ಇರುತ್ತಾರೆ ಅದರಲ್ಲಿ ಮಲ್ಲಿಕಾರ್ಜುನ ಖರ್ಗೆ ಬಂದರೂ ಅಚ್ಚರಿ ಇಲ್ಲ ಎಂದಿದ್ದಾರೆ.

ಸಿದ್ದು–ಡಿಕೆಶಿ ಕುರ್ಚಿ ಜಗಳದಲ್ಲಿ ಮೂರನೇಯವರಿಗೆ ಲಾಭ ಎಂಬಂತೆ ಕೊನೆಗಳಿಗೆಯಲ್ಲಿ ನಾನೇ ಸಿಎಂ ಆಗುತ್ತೆ?ನೆ ಎಂದು ಖರ್ಗೆ ಬಂದರೂ ಬರಬಹುದು ಎಂದು ಹೇಳಿದ್ದಾರೆ. ಶಿವಕುಮಾರ್ ಮಾತು ಒಂದೊಂದು ರೀತಿ ಇವೆ. ಅವರ ಇವತ್ತಿನ ಮಾತು ಕೇಳಿದರೆ ಸನ್ಯಾಸಿ ಆಗ್ತಾರೇನೋ ಅನಿಸುತ್ತೆ. ಅವರು ಜಿಗುಪ್ಸೆಗೊಂಡಿದ್ದಾರೆ ಎಂದರು.

ನನಗೆ ಬಂದಿರುವ ಮಾಹಿತಿ ಪ್ರಕಾರ ಖರ್ಗೆ ಅವರೇ ಬರಬಹುದು. ಬೆಳಗಾವಿ ಅಧಿವೇಶನದಲ್ಲಿ ಹೊಸ ಸಿಎಂ ಇರುತ್ತಾರೆ,ಇನ್ನು ಕಾಂಗ್ರೆಸ್‌ನಲ್ಲಿ ಸಚಿವರಾಗಬೇಕು ಅಂದ್ರೆ ಕಪ್ಪು ಹಣ ಕೊಡಬೇಕು ಎಂದು ಆರೋಪಿಸಿದ್ದಾರೆ.

ಮಂತ್ರಿಗಳು ಹಣಕೊಡಲು ಆಗಲ್ಲ ಅಂದ್ರೆ ಗೇಟ್ ಪಾಸ್ ಕೊಟ್ಟು ಕಳುಹಿಸುತ್ತಾರೆ, ಎಲ್ಐಸಿ ಏಜೆಂಟರಿಗೆ ಟಾರ್ಗೆಟ್ ನೀಡುವಂತೆ ಕಲೆಕ್ಷನ್ ಟಾರ್ಗೆಟ್ ಕೊಡುತ್ತಿದ್ದಾರೆ ಆರೋಪಿಸಿದರು.

# ಬಿಕ್ಕಟ್ಟಿನಿಂದ ಬಳಲುತ್ತಿರುವ ಜಗತ್ತು ಭಾರತವನ್ನು ಭರವಸೆಯಿಂದ ನೋಡುತ್ತಿದೆ : ಭಾಗವತ್

**ಜಬಲ್ಪುರ,ನ.4–**ಇಡೀ ಜಗತ್ತು ಬಿಕ್ಕಟ್ಟಿನಲ್ಲಿದೆ ಮತ್ತು ಅದರ ಹಲವಾರು ಸಮಸ್ಯೆಗಳಿಗೆ ಪರಿಹಾರಗಳನ್ನು ಒದಗಿಸುವ ಭರವಸೆಯೊಂದಿಗೆ ಭಾರತವನ್ನು ನೋಡುತ್ತಿದೆ ಎಂದು ರಾಷ್ಟ್ರೀಯ ಸ್ವಯಂಸೇವಕ ಸಂಘದ ಮುಖ್ಯಸ್ಥ ಮೋಹನ್ ಭಾಗವತ್ ಅವರು ಹೇಳಿದ್ದಾರೆ.

ಜಬಲ್ಪುರದಲ್ಲಿ ಪ್ರಸಿದ್ಧ ಧಾರ್ಮಿಕ ಸಂಘಟನೆಯೊಂದು ನಡೆಸಿದ ಜೀವನ ಉತ್ಕರ್ಷ ಮಹೋತ್ಸವ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು, ಧರ್ಮ ಮತ್ತು ಸಂಸ್ಕೃತಿಯ ಮಾರ್ಗವನ್ನು ಅನುಸರಿಸುವುದರಿಂದ ಜಗತ್ತು ಭಾರತದಿಂದ ನಿರೀಕ್ಷೆಗಳನ್ನು ಹೊಂದಿದೆ ಎಂದರು. ಸಾಮಾನ್ಯ ಭಾಷೆಯಲ್ಲಿ, ಸಂಸ್ಕೃತಿ ಎಂದರೆ ನೈತಿಕ, ಸದ್ಗುಣಶೀಲ ನಡವಳಿಕೆ,ಪರಸ್ಪರ ಸದ್ಭಾವನೆಯ ಭಾವನೆ ಮತ್ತು ಆಳವಾದ ಸಂಪರ್ಕ ಇದ್ದಾಗ ಮಾತ್ರ ಜನರು ಸಭ್ಯವಾಗಿ ವರ್ತಿಸುತ್ತಾರೆ ಎಂದು ಭಾಗವತ್ ಹೇಳಿದರು.

ಈ ಉದಾತ್ತ ಗುಣಲಕ್ಷಣಗಳ ಅನುಪಸ್ಥಿತಿಯಲ್ಲಿ, ಪ್ರತಿಕೂಲ ಸಂಬಂಧಗಳು ಬೆಳೆಯುತ್ತವೆ, ಇದು ಸಂಘರ್ಷಗಳಿಗೆ ಕಾರಣವಾಗುತ್ತದೆ ಎಂದು ಎಚ್ಚರಿಸಿದ್ದಾರೆ.ಭಾರತವು ಇಂದಿಗೂ ತನ್ನ ಶ್ರೀ?ಮಂತ ಸಂಸ್ಕೃತಿ ಮತ್ತು ಆಧ್ಯಾತ್ಮಿಕತೆಯ ಪರಂಪರೆಯನ್ನು ಸಂರಕ್ಷಿಸಿದೆ ಮತ್ತು ಅದು ಕಾಲಕಾಲಕ್ಕೆ ಜಗತ್ತಿಗೆ ಸರಿಯಾದ ಮಾರ್ಗವನ್ನು ತೋರಿಸಲು ಅನುವು ಮಾಡಿಕೊಟ್ಟಿದೆ ಎಂದು ಅವರು ಹೇಳಿದರು.

ವಾಸ್ತವದಲ್ಲಿ, ನಾವೆಲ್ಲರೂ ಒಂದೇ. ನಾವೆಲ್ಲರೂ ಸಂಪರ್ಕ ಹೊಂದಿದ್ದೇವೆ. ಭಾರತಕ್ಕೆ ಈ ಸಂಪರ್ಕವಿದೆ, ಆದರೆ ಜಗತ್ತು ಹಾಗೆ ಮಾಡುವುದಿಲ್ಲ. ಅದಕ್ಕಾಗಿಯೇ ಇಂದು ಜಗತ್ತು ಬಿಕ್ಕಟ್ಟಿನಲ್ಲಿದೆ ಮತ್ತು ಭಾರತದಿಂದ ನಿರೀಕ್ಷೆಗಳನ್ನು ಹೊಂದಿದೆ ಎಂದು ಅವರು ವಿವರಿಸಿದರು. ಆಧ್ಯಾತ್ಮಿಕತೆ ಮತ್ತು ನೀತಿವಂತ ನಡವಳಿಕೆಯೊಂದಿಗೆ ಸಾಮರಸ್ಯದಿಂದ ಜೀವನವನ್ನು ಹೇಗೆ ನಡೆಸಬೇಕೆಂದು ಜಗತ್ತು ಈಗ ಭಾರತದಿಂದ ಕಲಿಯಲು



ಬಯಸುತ್ತದೆ.ಸಂತರು ಸಮಾಜಕ್ಕೆ ಸರಿಯಾದ ನಿರ್ದೇಶನ ನೀಡುತ್ತಾರೆ ಮತ್ತು ಅದಕ್ಕಾಗಿಯೇ ಆರ್‌ಎಸ್‌ಎಸ್ ಅಂತಹ ಆಧ್ಯಾತಿಕ ವ್ಯಕ್ತಿಗಳೊಂದಿಗೆ ತೊಡಗಿಸಿಕೊಂಡಿದೆ ಎಂದು ತಿಳಿಸಿದರು.

ಬಿಎಪಿಎಸ್ ಸ್ವಾಮಿನಾರಾಯಣ ಸಂಸ್ಥೆಯ ಆಧ್ಯಾತ್ಮಿಕ ನಾಯಕ ಈಶ್ವರಚರಣ್ ಸ್ವಾಮಿ ಕೂಡ ಐದು ದಿನಗಳ ಜೀವನ ಉತ್ಕರ್ಷ ಮಹೋತ್ಸವದ ಉದ್ಘಾಟನಾ ಅಧಿವೇಶನದಲ್ಲಿ ಉಪಸ್ಥಿತರಿದ್ದರು.ಈ ಕಾರ್ಯಕ್ರಮವು ವಿಶ್ವಪ್ರಸಿದ್ಧ ಬಿಎಪಿಎಸ್ ಸ್ವಾಮಿನಾರಾಯಣ ಸಂಸ್ಥೆಯ ಆಧ್ಯಾತ್ಮಿಕ ಮುಖ್ಯಸ್ಥ ಜಬಲ್ಪುರದಲ್ಲಿ ಜನಿಸಿದ ಮಹಾಂತ ಸ್ವಾಮಿ ಮಹಾರಾಜ್ ಅವರ ಜೀವನ, ಬೋಧನೆಗಳು ಮತ್ತು ಸೇವೆಗೆ ಸಮರ್ಪಿತವಾಗಿದೆ. ಈ ಸಂದರ್ಭದಲ್ಲಿ, ಭಾಗವತ್ ಅವರು ಸ್ವಾಮಿ ಭದ್ರೇಶ್‌ದಾಸ್ ಅವರ ಪುಸ್ತಕವನ್ನು ಬಿಡುಗಡೆ ಮಾಡಿದರು.

# ಜವಾಬ್ದಾರಿ ನೆನಪಿಸಿಕೊಂಡ ಪ್ರಿಯಾಂಕ್: ಅಶೋಕ್ ವ್ಯಂಗ್ಯ



**ಬೆಂಗಳೂರು, ನ. 4–** ಸದಾ ಆರ್‌ಎಸ್‌ಎಸ್ ಬಗ್ಗೆ ಟೀಕೆ ಮಾಡುತ್ತಾ ಕಾಲ ಕಳೆಯುತ್ತಿದ್ದ ಸಚಿವ ಪ್ರಿಯಾಂಕ ಖರ್ಗೆಯವರು ಬೆಂಗಳೂರು ಟೆಕ್ ಸಮ್ಮಿಟ್ ಆಯೋಜಿಸುವ ಮೂಲಕ ತಮಗೆ ಒಂದು ಖಾತೆಯ ಜವಾಬ್ದಾರಿ ಇದೆ ಎಂದು ಕಡೆಗೂ ನೆನಪಿಸಿಕೊಂಡಿದ್ದು ಸಂತೋಷ ಎಂದು ಪ್ರತಿಪಕ್ಷ ಆರ್. ಅಶೋಕ್ ವ್ಯಂಗ್ಯವಾಡಿ, ಟೆಕ್ ಸಮ್ಮಿಟ್‌ಗೆ ಆಗಮಿಸುವ ಜಾಗತಿಕ ಪ್ರತಿನಿಧಿಗಳು ಪ್ರಯಾಣಿಸಬೇಕಾದ ರಸ್ತೆ ಗುಂಡಿ, ಹೊಂಡ, ಕಸದಿಂದ ತುಂಬಿದೆ. ಇದನ್ನು ಸರಿಪಡಿಸಲು ಮನವಿ ಮಾಡುವಿರಾ ಪ್ರಿಯಾಂಕ ಖರ್ಗೆಯವರೇ ಎಂದು ಪ್ರಶ್ನಿಸಿದ್ದಾರೆ.

ಬೆಂಗಳೂರು ಶೃಂಗ ಸಭೆಗೆ ಆಯೋಜಿಸುವ ಪ್ರಪಂಚದ ತಂತ್ರಜ್ಞಾನ ಲೋಕದ ದಿಗ್ಗಜರು ಬೆಂಗಳೂರಿಗೆ ಬರುವ ಮುನ್ನ ಇಲ್ಲಿನ ರಸ್ತೆಗಳನ್ನು ಸರಿಪಡಿಸಿ, ನಮ್ಮ ನಗರವನ್ನು ಮತ್ತೊಂದು ಸುತ್ತಿನ ಅವಮಾನದಿಂದ ಉಳಿಸಲಿ ಎಂಬುದೇ ಜನರ ನಿರೀಕ್ಷೆ ಎಂದು ಅವರು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಟ್ ಮಾಡಿದ್ದಾರೆ.

ಕಳೆದ ಎರಡೂವರೆ ವರ್ಷಗಳಿಂದ ಈ ನಾಲಾಯಕ್ ಕಾಂಗ್ರೆಸ್ ಸರ್ಕಾರ ಬೆಂಗಳೂರಿನ ಮೂಲ ಸೌಕರ್ಯವನ್ನು ಹಾಳು ಮಾಡಿದೆ. ಟ್ರಾಫಿಕ್ ಸಮಸ್ಯೆ ಉಲ್ಬಣಿಸಿದೆ. ಹೂಡಿಕೆದಾರರನ್ನು ಮತ್ತು ಸ್ಟಾರ್ಟ್‌ಅಪ್‌ಗಳನ್ನು ಹೆದರಿಸಿ, ಬೆದರಿಸಿ ಅವಮಾನ ಮಾಡಿ ಬೆಂಗಳೂರಿನ ವರ್ಚಸ್ಸಿಗೆ ಜಾಗತಿಕ ಬ್ರ್ಯಾಂಡ್‌ಗೆ ಧಕ್ಕೆ ತಂದಿದೆ ಎಂದು ಅವರು ಟೀಕಿಸಿದ್ದಾರೆ.

ಬೆಂಗಳೂರು ಟೆಕ್ ಶೃಂಗಸಭೆ ನಮ್ಮ ಬೆಂಗಳೂರು ನಗರಕ್ಕೆ ಮತ್ತೊಂದು ಜಾಗತಿಕ ಮುಜುಗರವಾಗುವುದಿಲ್ಲ ಎಂದು ಸರ್ಕಾರ ಗ್ಯಾರಂಟಿ ನೀಡುತ್ತದೆಯೇ ಎಂದು ಅವರು ಪ್ರಶ್ನಿಸಿದ್ದಾರೆ.

**ಕಲ್ಯಾಣ ಕರ್ನಾಟಕದ 38 ಹಳ್ಳಿಗಳಿಗೆ ಬಸ್ಸೇ ಇಲ್ಲ**–ಕಲ್ಯಾಣ ಕರ್ನಾಟಕದ 38 ಹಳ್ಳಿಗಳಲ್ಲಿ ರಸ್ತೆ ಇಲ್ಲದೆ ಬಸ್‌ಗಳು ಓಡಾಡದೇ ಶಕ್ತಿ ಯೋಜನೆ ನಿರುಪಯುಕ್ತವಾಗಿರುವ ಬಗ್ಗೆಯೂ ಎಕ್ಸ್‌ನಲ್ಲಿ ಪ್ರಸ್ತಾಪಿಸಿರುವ ಆರ್ ಅಶೋಕ್, ವಿದೇಶಾಂಗ ನೀತಿಯಿಂದ ಹಿಡಿದು ಮಿಲಟರಿ ತಂತ್ರಗಾರಿಗೆವರೆಗೆ ಎಲ್ಲದರ ಬಗ್ಗೆ ಉದ್ದುದ್ದ ಬೊಗಳೆ ಭಾಷಣ ಬಿಗಿಯುವ ಪ್ರಿಯಾಂಕ ಖರ್ಗೆ ಅವರೇ ತಮಗೆ ಕಲ್ಯಾಣ ಕರ್ನಾಟಕದ ಹಳ್ಳಿಗಳ ಜನ ಬಸ್ಸಿಲ್ಲದೆ ದುಪ್ಪಟ್ಟು ಬೆಲೆ ತೆತ್ತು ಸ್ವಂತ ಗಾಡಿ, ಟಂಟಂ ಜೀಪ್‌ನಲ್ಲಿ ಪ್ರಯಾಣ ಮಾಡುತ್ತಿರುವುದು ಕಾಣುತ್ತಿಲ್ಲವೆ ಎಂದು ಪ್ರಶ್ನಿಸಿದ್ದಾರೆ.

ಕಲ್ಯಾಣ ಕರ್ನಾಟಕದ 38 ಗ್ರಾಮಗಳಲ್ಲಿ ಯೋಗ್ಯ ರಸ್ತೆ ಇಲ್ಲದೆ ಬಸ್‌ಗಳೇ ಇಲ್ಲ. ಕಲ್ಯಾಣ ಕರ್ನಾಟಕದ ಜನರ ಮತ ಪಡೆದು ಅಧಿಕಾರ ಅನುಭವಿಸಿ ತಮ್ಮ ಕುಟುಂಬದ ಕಲ್ಯಾಣ ಮಾಡಿಕೊಂಡಿರುವುದೇ ನಿಮ್ಮ ಏಕೈಕ ಸಾಧನೆ ಎಂದು ಅಶೋಕ್ ಪ್ರಿಯಾಂಕ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಆರ್‌ಎಸ್‌ಎಸ್ ಬಗ್ಗೆ ವಿವಾದಾತ್ಮಕ ಹೇಳಿಕೆಗಳನ್ನು ಕೊಟ್ಟು ನಿಮ್ಮ ವೈಫಲ್ಯಗಳನ್ನು ಮರೆ ಮಾಚಬಹುದು. ಜನರನ್ನು ಯಾಮಾರಿಸಬಹುದು ಎಂದು ಕನಸು ಕಾಣಬೇಡಿ. ಕಲ್ಯಾಣ ಕರ್ನಾಟಕದ ಜನ ಖರ್ಗೆ ಕುಟುಂಬ ಮತ್ತು ಕಾಂಗ್ರೆಸ್ ಪಕ್ಷವನ್ನು ನಿಷೇಧ ಮಾಡುವ ದಿನ ದೂರವಿಲ್ಲ ಎಂದು ಅಶೋಕ್ ತಿಳಿಸಿದ್ದಾರೆ.

**ಕಲಬುರಗಿ,ನ.4– ನಗರದ ಸೇಡಂ ವರ್ತುಲ ರಸ್ತೆ ವೃತ್ತದಲ್ಲಿ ಒಳಚರಂಡಿ ತುಂಬಿ ಕೊಳಚೆ ನೀರು ರಸ್ತೆಯ ಮೇಲೆ ಹರಿದು ಗಬ್ಬು ನಾರುತ್ತಿದೆ. ಇದರಿಂದ ಪಾದಚಾರಿಗಳಿಗೆ ತೀವ್ರ ತೊಂದರೆ ಆಗುತ್ತಿದ್ದು, ಸಂಭದಪಟ್ಟವರು ಈ ಬಗ್ಗೆ ಗಮನ ಹರಿಸಿ ಸಮಸ್ಯೆ ಬಗೆಹರಿಸಬೇಕು ಎಂದು ನಾಗರಿಕರು ಒತ್ತಾಯಿಸಿದ್ದಾರೆ.**



ಯುವ ಮಾರ್ಗ

ಬುಧವಾರ: 05–11–2025

## ಗುಲಬರ್ಗಾ ವಿಶ್ವವಿದ್ಯಾಲಯಕ್ಕೆ ವಿಶ್ವಗುರು ಮಹಾತ್ಮ ಬಸವೇಶ್ವರರ ಹೆಸರಿಡಿ



**ಬೀದರ್,ನ.4–**ಕಲ್ಯಾಣ ಕರ್ನಾಟಕದ ಹೆಬ್ಬಾಗಿಲು ಎನಿಸಿಕೊಂಡಿರುವ ಕಲಬುರಗಿಯಲ್ಲಿ ಇರುವ ಗುಲಬರ್ಗಾ ವಿಶ್ವವಿದ್ಯಾಲಯಕ್ಕೆ ವಿಶ್ವಗುರು ಮಹಾತ್ಮ ಬಸವೇಶ್ವರ ವಿಶ್ವವಿದ್ಯಾಲಯವೆಂದು ನಾಮಕರಣ ಮಾಡಬೇಕೆಂದು ಬೆಂಗಳೂರಿನ ಚನ್ನಬಸವೇಶ್ವರ ಜ್ಞಾನಪೀಠದ ಪೀಠಾಧ್ಯಕ್ಷ ಪೂಜ್ಯ ಶ್ರೀ ಡಾ. ಚನ್ನಬಸವಾನಂದ ಸ್ವಾಮೀಜಿ ತಿಳಿಸಿದರು.

ಜಿಲ್ಲಾಧಿಕಾರಿ ಮುಖಾಂತರ ಮುಖ್ಯಮಂತ್ರಿ ಸಿದ್ಧರಾಮಯ್ಯನವರಿಗೆ ಬರೆದ ಮನವಿ ಪತ್ರ ಸಲ್ಲಿಸಿದ ಬಳಿಕ ಮಾಧ್ಯಮದವರಿಗೆ ಪ್ರಕಟಣೆ ಹೊರಡಿಸಿದ ಅವರು ಇದು ಹಲವಾರು ವರ್ಷಗಳ ನಮ್ಮ ಬೇಡಿಕೆ ಆಗಿದೆ. ಈ ಕುರಿತು ಕೂಡಲ ಸಂಗಮದ ಬಸವ ಧರ್ಮ ಪೀಠದ ಪೀಠಾಧ್ಯಕ್ಷರಾಗಿದ್ದ ವಿಶ್ವದ ಪ್ರಪ್ರಥಮ ಮಹಿಳಾ ಮಹಾಜಗದ್ಗುರು ಪೂಜ್ಯ ಡಾ. ಮಾತೆ ಮಹಾದೇವಿ ಮಾತಾಜಿಯವರ ನೇತೃತ್ವದಲ್ಲಿ ರಾಷ್ಟ್ರೀಯ ಬಸವ ದಳ, ಲಿಂಗಾಯತ ಧರ್ಮ ಮಹಾಸಭಾ, ಕ್ರಾಂತಿ ಗಂಗೋತ್ರಿ ಅಕ್ಕನಾಗಲಾಂಬಿಕಾ ಮಹಿಳಾ ಗಣ ಸೇರಿದಂತೆ ಹಲವಾರು ಸಂಘಟನೆಗಳ ಸಂಯುಕ್ತಾಶ್ರಯದಲ್ಲಿ 1995–96ರ ಅವಧಿಯಲ್ಲಿ ತೀವ್ರವಾದ ಹೋರಾಟ ನಡೆದಿದೆ. ಆಗಿನ ಸಂದರ್ಭದಲ್ಲಿ ಸನ್ಮಾನ್ಯ ದೇವೇಗೌಡರು ಮುಖ್ಯಮಂತ್ರಿಯಾಗಿದ್ದರು, ಸನ್ಮಾನ್ಯ ಜೆ.ಎಚ್.ಪಟೇಲರು ರಾಜ್ಯದ ಉಪಮುಖ್ಯಮಂತ್ರಿ ಆಗಿದ್ದರು, ತಾವು ಹಣಕಾಸು ಸಚಿವರು ಆಗಿ ಸಂಪುಟದಲ್ಲಿ ಇದ್ದೀರಿ. ಆ ಸಂದರ್ಭದಲ್ಲಿ ರಾಜ್ಯದಾದ್ಯಂತ ಹೋರಾಟ ತೀವ್ರವಾಗಿತ್ತು. ಸನ್ಮಾನ್ಯ ದೇವೇಗೌಡರು ಮತ್ತು ಮಾನ್ಯ ಜೆ.ಎಚ್.ಪಟೇಲ ಅವರು ಗುಲಬರ್ಗಾ ವಿಶ್ವವಿದ್ಯಾಲಯಕ್ಕೆ ಬಸವೇಶ್ವರ ಹೆಸರು ಸೂಕ್ತವಾಗಿದೆ ಎಂದು ವಿಧಾನ ಸಭೆಯಲ್ಲಿ ಘೋಷಣೆ ಮಾಡಿ ಸಂಪುಟ ಸಭೆಯಲ್ಲಿ ನಿರ್ಣಯ ತೆಗೆದುಕೊಳ್ಳಲಾಯಿತು. ಆದ್ದರಿಂದ ಹೋರಾಟವನ್ನು ಪರಮಪೂಜ್ಯ ಮಾತೆ ಮಹಾದೇವಿ ತಾಯಿಯವರು ಹಿಂತೆಗೆದುಕೊಂಡಿದ್ದರು. ಆದರೆ ನಂತರದ ದಿನಗಳಲ್ಲಿ ಹಲವಾರು ಒತ್ತಡಗಳು ಉಂಟಾಗಿ ಅದು ಇಲ್ಲಿಯವರೆಗೆ ನೆನೆಗುದಿಗೆ ಬಿದ್ದಿದೆ ಎಂದರು.

ಗುಲಬರ್ಗಾ ವಿ.ವಿ. ಗೆ ಬಸವೇಶ್ವರರ ಹೆಸರೇ ಇಡುವುದು ಏಕೆ ಸೂಕ್ತ ಎಂದರೆ 12ನೇ ಶತಮಾನದಲ್ಲಿ ವಿಶ್ವಗುರು ಬಸವಣ್ಣನವರ ನೇತೃತ್ವದಲ್ಲಿ ಅನುಭವ ಮಂಟಪ ಸ್ಥಾಪನೆಯಾದ ಪವಿತ್ರ ಕ್ಷೇತ್ರ ಬಸವಕಲ್ಯಾಣ. ಇದು ಗುಲಬರ್ಗಾ ವಿಭಾಗದಲ್ಲಿ ಬರುತ್ತದೆ. ಈಗಿನ ಕಲಬುರಗಿ ಕಲ್ಯಾಣ ಕರ್ನಾಟಕದ ಹೆಬ್ಬಾಗಿಲಾಗಿದೆ. ಈ ಕಲ್ಯಾಣ ಕರ್ನಾಟಕ ಭಾಗದಲ್ಲಿ ಮೊಟ್ಟಮೊದಲ ಸ್ಥಾಪನೆಯಾದ ಏಕೈಕ ವಿಶ್ವವಿದ್ಯಾಲಯ ಅದು ಗುಲಬರ್ಗಾ ವಿಶ್ವವಿದ್ಯಾಲಯ. ಆದ್ದರಿಂದ ಬಸವಾದಿ ಶರಣರ ಸಂದೇಶಗಳನ್ನು ವಚನ ಸಾಹಿತ್ಯದ ಮೌಲ್ಯಗಳನ್ನು ಸಮಾನತೆ, ಕಾಯಕ, ದಾಸೋಹ, ಸಾಮಾಜಿಕ ನ್ಯಾಯ ಈ ಎಲ್ಲಾ ಮೌಲ್ಯಗಳನ್ನು ಒಳಗೊಂಡ ವಚನ ಸಾಹಿತ್ಯದ ಪ್ರಚಾರ ಪ್ರಸಾರ ಕಲ್ಯಾಣ ಕರ್ನಾಟಕ ಭಾಗದಿಂದ ಅಥವಾ ಕಲಬುರಗಿ ವಿಭಾಗದಿಂದ ಆಗಬೇಕಾದ ಅಗತ್ಯವಿದೆ ಎಂಬುದನ್ನು ಗುಲಬರ್ಗಾ ವಿಶ್ವವಿದ್ಯಾಲಯ ಸ್ಥಾಪನೆ ಮಾಡುವಾಗ ಪೀಠಿಕೆಯಲ್ಲಿಯೂ ಹೇಳಲಾಗಿದೆ. ಇದಕ್ಕೆ ಹಲವಾರು ದಲಿತ ಸಂಘಟನೆಗಳು ಮತ್ತು ಹಿಂದುಳಿದ ವರ್ಗದವರು, ಅಲ್ಪಸಂಖ್ಯಾತರರು ಸೇರಿದಂತೆ ಎಲ್ಲಾ ಸಂಘಟನೆಗಳ ಬೆಂಬಲವೂ ಕೂಡ ಆ ಸಂದರ್ಭದಲ್ಲಿ ಸಿಕ್ಕಿತ್ತು.

ಹೀಗಾಗಿ ರಾಜಕೀಯವಾಗಿ ಕೆಲವೊಂದು ಗೊಂದಲಗಳು ಉಂಟಾಗಿ ಅಂದು ಗುಲಬರ್ಗಾ ವಿ.ವಿ. ಗೆ ಬಸವೇಶ್ವರರ ಹೆಸರಿಡಲು ಸಾಧ್ಯವಾಗಿಲ್ಲ. ಅನೇಕ ರೀತಿಯ ಹೋರಾಟಗಳು ಮೂರ್ನಾಲ್ಕು ವರ್ಷಗಳ ವರೆಗೆ ನಡೆದರೂ ಕೂಡ ಅದು ಸಾಧ್ಯವಾಗಿಲ್ಲ. ಈಗ ತಾವು ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳಿಗೆ ವಿವಿಧ ಮಹಾತ್ಮರ ಹೆಸರುಗಳನ್ನು ನಾಮಕರಣ ಮಾಡಬೇಕೆಂಬ ಆಶಯ ಹೊಂದಿರುವುದರಿಂದ ಗುಲಬರ್ಗಾ ವಿ.ವಿ.ಗೆ ಬಸವೇಶ್ವರ ಹೆಸರನ್ನು ಇಟ್ಟು, ಗುರುಬಸವಣ್ಣನವರ ತತ್ವಗಳನ್ನು ಜಾಗತಿಕ ಮಟ್ಟದಲ್ಲಿ ಪ್ರಚಾರವಾಗಲು ಮತ್ತೊಮ್ಮೆ ತಮ್ಮಿಂದ ದೊಡ್ಡ ಸೇವೆ ಆಗಲಿದೆ. ಬಸವೇಶ್ವರ ಹೆಸರಿಟ್ಟರೆ ಪೂಜ್ಯ ಮಾತೆ ಮಹಾದೇವಿಯವರು ಮಾಡಿದ್ದ ಹೋರಾಟಕ್ಕೆ ಮತ್ತು ಸಂಕಲ್ಪಕ್ಕೆ ಗೌರವ ಕೊಟ್ಟಂತಾಗುತ್ತದೆ ಎಂದು ಪೂಜ್ಯರು ತಿಳಿಸಿದರು.

## ಯುವಕನ ಕೊಲೆ: 24 ಗಂಟೆಯೊಳಗಡೆ ಆರೋಪಿಗಳ ಸೆರೆ

**ಕಲಬುರಗಿ,ನ.4–**ಇದೇ ತಿಂಗಳು 2 ರಂದು ನಗರದ ವಿಜಯ ನಗರದಲ್ಲಿ ನಡೆದ ರಿತೇಶ್ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಆರ್.ಜಿ.ನಗರ ಪೊಲೀಸರು 24 ಗಂಟೆಯೊಳಗಡೆ ಇಬ್ಬರು ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ವಿಜಯ ನಗರದ ಸಚಿನ್ ತಂದೆ ಜಗನ್ನಾಥ ಡೊಂಗರಗಾಂವ (35) ಮತ್ತು ಶ್ರೀಕಾಂತ ತಂದೆ ಲಕ್ಷ್ಮಣ ಬಾವಿಕಟ್ಟಿ (29) ಎಂಬುವವರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಬೆಂಗಳೂರಿನ ಬಂಡೆ ಬೊಮ್ಮಸಂದ್ರದಲ್ಲಿ ಬಾಡಿಗೆ ಮನೆಯಲ್ಲಿದ್ದು, ಉಪ ಜೀವನ ನಡೆಸುತ್ತಿದ್ದ ರಿತೇಶ್ ಇತ್ತೀಚೆಗಷ್ಟೇ ಕಲಬುರಗಿಗೆ ಆಗಮಿಸಿದ್ದ. ವಿಜಯ ನಗರದಲ್ಲಿರುವ ಮನೆಯ ಹತ್ತಿರ ರಿತೇಶ್ ತಲೆ ಮೇಲೆ ರೇಜಿಗಲ್ಲು ಎತ್ತಿ ಹಾಕಿ ಕೊಲೆ ಮಾಡಲಾಗಿತ್ತು.

## ಕನ್ನಡ ಭಾಷೆ ಸರ್ವಶ್ರೇಷ್ಠ: ನೆಲ, ಜಲ ಭಾಷೆ ಬಗ್ಗೆ ಪ್ರತಿಯೊಬ್ಬರು ಗೌರವ ನೀಡಬೇಕು: ಕಟ್ಟಿಮನಿ



**ಯುವ ಮಾರ್ಗ ಸುದ್ದಿ**

**ದೇವದುರ್ಗ,ನ.4–** ಪ್ರತಿಯೊಬ್ಬರು ಕನ್ನಡ ಭಾಷೆ ಗೌರವಿಸುವ ಮೂಲಕ ನೆಲ, ಜಲ, ಭಾಷೆ ಎಂದು ಬಂದಾಗ ನಾವೆಲ್ಲರೂ ಒಗ್ಗಟ್ಟಾಗಿ ಹೋರಾಟ ಮಾಡಬೇಕು ಎಂದು ತಹಶೀಲ್ದಾರ ನಾಗಮ್ಮ ಕಟ್ಟಿಮನಿ ಹೇಳಿದರು. ಪಟ್ಟಣದ ಸಾರ್ವಜನಿಕ ಕ್ಲಬ್ ಆವರಣದಲ್ಲಿ ತಾಲೂಕ ಆಡಳಿತ ವತಿಯಿಂದ ಆಯೋಜಿಸಿದ್ದ ಕನಾರ್ಟಕ ರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಕಲ್ಯಾಣ ಕರ್ನಾಟಕ ಭಾಗದಲ್ಲಿ ನೆಲಿಸಿದ ಶರಣರು, ಸಂತರು ವಿವಿಧ ಕ್ಷೇತ್ರದಲ್ಲಿ ಅನೇಕ ಕೊಡುಗೆ ನೀಡಿದ್ದಾರೆ. ಅಂತಹವರ ಆದರ್ಶ, ತತ್ವಗಳು ಪ್ರತಿಯೊಬ್ಬರು ಜೀವನಕ್ಕೆ ಅಳವಡಿಸಿಕೊಂಡು ಬದುಕು ಕಟ್ಟಿಕೊಳ್ಳಬೇಕು ಎಂದು ಹೇಳಿದರು. ಕನ್ನಡ ಭಾಷೆಗೆ ಸಾವಿರಾರ ವರ್ಷಗಳ ಕಾಲ ಇತಿಹಾದ ಹೊಂದಿದೆ ಎಂದು ಹೇಳಿದರು. ಹೆಗಡದಿನ್ನಿ ಸರಕಾರಿ ಶಾಲಾ ಶಿಕ್ಷಕ ಚನ್ನಬಸವ ಉಪನ್ಯಾಸ ನೀಡಿ ಅವರು ಮಾತನಾಡಿ, 12ನೇ ಶತಮಾನದ ಬಸಣ್ಣನವರು ಜೀವ ಜ್ಯೋತಿ ಬೆಳೆಗಿಸಿದ್ದಾರೆ. ಅವರ ವಚನೆಗಳು ಮಹಾರಾಷ್ಟದ ಜೈಲಿನ ಖೈದಿಗಳಿಗೆ ಹಿಂದಿ ಭಾಷೆಯ ಮೂಲಕ ಪರಿವರ್ತನೆ ಮಾಡಲಾಗುತ್ತದೆ ಎಂದು ಹೇಳಿದರು. ನಾಡಿಗೆ ಮಹನೀಯರು ಅನೇಕ ಕೊಡುಗೆಗಳು ನೀಡುವ ಮೂಲಕ ಬದಲಾವಣೆ ತಂದಿದ್ದಾರೆ. ಅಂತಹವರ ಜೀವನ ಪಾಠವನ್ನು ಮೈಗೊಂಡಿಸಿಕೊಂಡು, ಜೀವನ ರೂಪಿಸಿಕೊಳ್ಳಬೇಕು ಎಂದು ಹೇಳಿದರು. ಎಪಿಎಂಸಿ ಅಧ್ಯಕ್ಷ ಆದನಗೌಡ ಪಾಟೀಲ್ ಬುಂಕಲದೊಡ್ಡಿ, ತಾಲೂಕ ಗ್ಯಾರಂಟಿ ಯೋಜನೆ ಅಧ್ಯಕ್ಷ ಲಕ್ಷ್ಮಣ ಜ್ಯೋತಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಬಸವರಾಜ ಹಟ್ಟಿ, ಸಿಪಿಐ ಎನ್.ವೈ. ಗುಂಡುರಾವ್, ಬಿಇಒ ಪಿ.ಮಹಾದೇವಯ್ಯ, ಪುರಸಭೆ ಮುಖ್ಯಾಧಿಕಾರಿ ಕೆ.ಹಂಪಯ್ಯ, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಮಂಜುಳಾ ಅಸುಂಡಿ, ಎಇಇ ವಿಜಯಕುಮಾರ ರಾಠೋಡ್, ಕೃಷಿ ಸಹಾಯಕ ನಿರ್ದೇಶಕ ಶ್ರೀನಿವಾಸ ನಾಯಕ, ಸಮನ್ವಯ ಅಧಿಕಾರಿ ಶಿವರಾಜ ಪೂಜಾರಿ, ಎಂ.ವಿ. ಕೊಡಿಮಠ, ಕಸಾಪ ಅಧ್ಯಕ್ಷ ಎಚ್.ಶಿವರಾಜ, ಡಿ.ರಾಜಕುಮಾರ,ಅಲ್ಲಾವುದ್ದೀನ್, ಅಮೃತ ಪಾಟೀಲ್ ಸೇರಿದಂತೆ ಇತರರು ಇದ್ದರು.

## ಝೂಪೂರ ಶಾಲೆಯಲ್ಲಿ ಜಾನಪದ ಕಲಾವಿದರಿಗೆ ಸನ್ಮಾನ



**ಕಲಬುರಗಿ,ನ.4–**ತಾಲ್ಲೂಕಿನ ಝೂಪೂರ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಕನ್ನಡ ಜಾನಪದ ಪರಿಷತ್ ಜಿಲ್ಲಾ ಘಟಕದ ವತಿಯಿಂದ ಹಮ್ಮಿಕೊಂಡಿದ್ದ ಜಾನಪದ ದಿನಾಚರಣೆ ಕಾರ್ಯಕ್ರಮದಲ್ಲಿ ಜಾನಪದ ಕಲಾವಿದರಾದ ಸುರೇಶ್ ಮಾಂಗ್, ಸೈಬಣ್ಣ ಮೇಲಿನಕೇರಿ, ಶರಣಪ್ಪ ಪೂಜಾರಿ, ಭೀಮರಾಯ ನಾಯ್ಕೋಡಿ, ಮರೆಪ್ಪ ಕಟ್ಟಿಮನಿ ಅವರನ್ನು ಶಾಲು ಹೊದಿಸಿ ಸನ್ಮಾನಿಸಿ ಗೌರವಿಸಲಾಯಿತು.

ಡಾ.ವಾಸುದೇವ ಸೇಡಂ, ಕನ್ನಡ ಜಾನಪದ ಪರಿಷತ್ ಜಿಲ್ಲಾ ಘಟಕದ ಎಂ.ಬಿ.ನಿಂಗಪ್ಪ, ಕಾರ್ಯದರ್ಶಿ ಹೆಚ್.ಬಿ.ಪಾಟೀಲ, ಶಾಲೆಯ ಮುಖ್ಯೋಪಾಧ್ಯಾಯ ದೇವಿಂದ್ರಪ್ಪ ಗಣಮುಖಿ, ಗುಲಬರ್ಗಾ ವಿಶ್ವವಿದ್ಯಾಲಯದ ಸಿಂಡಿಕೇಟ್ ಮಾಜಿ ಸದಸ್ಯ ಸುನೀಲಕುಮಾರ ಒಂಟಿ, ಬಸಯ್ಯ ಸ್ವಾಮಿ ಹೊದಲೂರ, ಎಸ್‌ಡಿಎಂಸಿ ಅಧ್ಯಕ್ಷ ಶರಣಬಸಪ್ಪ ಪೂಜಾರಿ, ಶಿವಯೋಗಪ್ಪ ಬಿರಾದಾರ, ರಾಜುಗೌಡ ಪಾಟೀಲ, ಬಸವರಾಜ ನಾಯ್ಕೋಡಿ, ಶಿಕ್ಷಕಿಯರಾದ ಶಾಂತಾಬಾಯಿ ಹಿರೇಮಠ, ಶಾರದಾ ಲಂಡನಕರ್, ಬಿಸಿಯೂಟದ ಸಿಬ್ಬಂದಿಗಳಾದ ಸಂಗೀತಾ ಕಟ್ಟಿಮನಿ, ಅಂಗನವಾಡಿ ಶಿಕ್ಷಕಿ ಭಾರತಿ, ಕಾರ್ಯಕರ್ತೆ ಶಿಲ್ಪಾ ನಡುವಿನಮನಿ, ಪಾರ್ವತಿ ಪೂಜಾರಿ ಸೇರಿದಂತೆ ಗ್ರಾಮದ ಗಣ್ಯರು, ಶಾಲಾ ಮಕ್ಕಳು ಮತ್ತು ಪಾಲಕರು ಉಪಸ್ಥಿತರಿದ್ದರು.

## ದತ್ತು ಪ್ರಕ್ರಿಯೆ ಪಾಲಿಸಿ, ಮಕ್ಕಳನ್ನು ಕಾಪಾಡಿ: ಮಂಜುಳಾ ಪಾಟೀಲ್



**ಕಲಬುರಗಿ,ನ.4–** ಮಕ್ಕಳನ್ನು ಕಾನೂನುಬದ್ಧವಾಗಿ ದತ್ತು ಪಡೆಯುವುದನ್ನು ರೂಢಿಸಿಕೊಳ್ಳುವ ಮೂಲಕ ಮಕ್ಕಳ ಭವಿಷ್ಯ ಕಾಪಾಡಬೇಕೆಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಂಜುಳಾ ವಿ.ಪಾಟೀಲ್ ಹೇಳಿದರು.

ಇಲ್ಲಿನ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಈ ನಿಟ್ಟಿನಲ್ಲಿ ನ.3ರಿಂದ ಅಂತಾರಾಷ್ಟ್ರೀಯ ದತ್ತು ಮಾಸಾಚರಣೆ ನವೆಂಬರ್–2024 ಹಮ್ಮಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳು ಈ ಅಭಿಯಾನದಲ್ಲಿ ಪಾಲ್ಗೊಂಡಿದ್ದು ನ.3ರಂದು ಕಲಬುರಗಿ ಶ್ರೀ ಶರಣಬಸವೇಶ್ವರ ಸಂಸ್ಥಾನದ ಡಾ.ದಾಕ್ಷಾಯಿಣಿ ಅವ್ವಾಜಿಯವರ ಸಾನ್ನಿಧ್ಯದಲ್ಲಿ ಮಮತೆಯ ತೊಟ್ಟಿಲಿನಲ್ಲಿ ಮಗುವನ್ನು ಮಲಗಿಸಿ ತೂಗುವ ಮೂಲಕ ಮಾಸಾಚರಣೆಗೆ ವಿದ್ಯುಕ್ತವಾಗಿ ಚಾಲನೆ ನೀಡಿದ್ದಾರೆ ಎಂದರು.

ಮಕ್ಕಳನ್ನು ದತ್ತು ಪಡೆಯುವ ಸಂದರ್ಭದಲ್ಲಿ ಭಾವೋದ್ವೇಗಕ್ಕೆ ಒತ್ತು ನೀಡುವ ಬದಲು ಕಾನೂನು ಪ್ರಕ್ರಿಯೆಗೆ ಒತ್ತು ನೀಡುವುದರಿಂದ ದತ್ತು ಪಡೆದ ಪೋಷಕರು ಹಾಗೂ ಅವರ ಕುಟುಂಬ ಸಂತೋಷವಾಗಿರಲು ಸಾಧ್ಯವಾಗುತ್ತದೆ. ಅದರಲ್ಲೂ ಆರೋಗ್ಯವಾಗಿರುವ ಮಕ್ಕಳನ್ನೇ ಎಲ್ಲರೂ ಹೆಚ್ಚಾಗಿ ದತ್ತು ತೆಗೆದುಕೊಳ್ಳಲು ಬಯಸುತ್ತಾರೆ. ಇಂತಹ ಸಂದರ್ಭದಲ್ಲಿ ವಿಶೇಷಚೇತನ ಮಕ್ಕಳನ್ನು ನಿರ್ಲಕ್ಷಿಸಲಾಗುತ್ತದೆ. ಹೀಗಾಗಿ, ಈ ವರ್ಷ ವಿಶೇಷಚೇತನ ಮಕ್ಕಳ ದತ್ತು ಪ್ರಕ್ರಿಯೆ ವರ್ಷ ಎಂದು ಆಚರಿಸಲಾಗುತ್ತಿದೆ ಎಂದು ಪಾಟೀಲ್ ಹೇಳಿದರು.ವಿದೇಶಿಯರು ಹೆಚ್ಚಾಗಿ ವಿಶೇಷಚೇತನ ಮಕ್ಕಳನ್ನು ದತ್ತು ಪಡೆಯುತ್ತಾರೆ. ಆದರೆ ನಮ್ಮಲ್ಲಿ ಇನ್ನೂ ಅಂತಹ ಧೋರಣೆ ಪಾಲಕರಲ್ಲಿ ಕಂಡುಬರುತ್ತಿಲ್ಲ. ಹಾಗಾಗಿ, ವಿಶೇಷಚೇತನ ಮಕ್ಕಳ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ವಿಶೇಷಚೇತನ ಮಕ್ಕಳನ್ನು ಸಹ ದತ್ತು ಪಡೆಯಬೇಕೆಂದು ಅವರು ಕರೆ ನೀಡಿದರು.ಮಕ್ಕಳ ಸಹಾಯವಾ ಣಿಯ ಬಸವರಾಜ ಟೆಂಗಳಿ, ಕಾನೂನು ಅಧಿಕಾರಿ ಭರತೇಶ ಶೀಲವಂತರ, ಮಕ್ಕಳ ಕಲ್ಯಾಣ ಸಮಿತಿಯ ವಿಶ್ವರಾಧ್ಯ ಇಜೇರಿ, ರಕ್ಷಣಾಧಿಕಾರಿ (ಅಸಾಂಸ್ಥಿಕ ಸೇವೆ) ಬಸವರಾಜ, ಮಾರ್ಗದರ್ಶಿ ಸಂಸ್ಥೆಯ ಆನಂದರಾಜ ಸೇರಿದಂತೆ ಇತರರಿದ್ದರು.

## ವಕೀಲರಿಗೆ ನವೇಶನ ನೀಡುವಂತೆ ಮನವಿ



**ಕೂಡ್ಲಿಗಿ,ನ.4–** ನಿವೇಶನ ರಹಿತ ವಕೀಲರಿಗೆ ನಿವೇಶನ ನೀಡುವಂತೆ ತಾಲೂಕು ವಕೀಲರು ಬಳಗ ಶಾಸಕ ಡಾ.ಎನ್.ಟಿ. ಶ್ರೀನಿವಾಸ ಇವರಿಗೆ ಸೋಮವಾರ ಪಟ್ಟಣದ ವಕೀಲರ ಭವನದಲ್ಲಿ ಮನವಿ ಸಲ್ಲಿಸಿತು. ಮನವಿ ಪತ್ರದಲ್ಲಿ ಕೂಡ್ಲಿಗಿ ಹೋಬಳಿ ಅಮ್ಮನಕೇರಿ ಕಂದಾಯ ಗ್ರಾಮಕ್ಕೆ ಸೇರಿದ ಸರ್ವೆ ನಂ.243/1 ವಿಸ್ತೀರ್ಣ:46.61 ಎಕರೆ ಸರ್ಕಾರಿ ಜಾಗವಿದ್ದು. ಇದರಲ್ಲಿ 12ಎಕರೆ ಜಾಗವನ್ನು ವಕೀಲರಿಗೆ ನಿವೇಶನಗಳನ್ನು ನೀಡುವಂತೆ ಒತ್ತಾಯಿಸಿದ್ದಾರೆ. ಇಂದಿನ ದಿನಮಾನಗಳಲ್ಲಿ ವಕೀಲರು ನಿವೇಶನ ಖರೀದಿಸಬೇಕಾದರೆ ತುಂಬಾ ಕಷ್ಟಕರ ವಿಷಯವಾಗಿದೆ. ವಕೀಲರಿಗೆ ಸರ್ಕಾರದ ಯಾವುದೇ ವೇತನವಾಗಲಿ ಇತರೆ ಸೌಲಭ್ಯಗಳು ಇರುವುದಿಲ್ಲ ಕೂಡ್ಲಿಗಿ ತಾಲೂಕು ಹಿಂದುಳಿದ ಹಳ್ಳಿಗಳಿಂದ ಕೂಡಿದ ಪ್ರದೇಶವಾಗಿರುವುದರಿಂದ ವಕೀಲರಿಗೆ ತುಂಬಾ ಕಡಿಮೆ ಆದಾಯ ಮೂಲ ಹೊಂದಿರುತ್ತಾರೆ. ಇದರಿಂದ ವಕೀಲರು ಕಳೆದ 40 ರಿಂದ 50ವರ್ಷಗಳಿಂದಲೂ ಬಾಡಿಗೆ ಮನೆಯಲ್ಲಿಯೇ ಜೀವನ ಸಾಗಿಸುವುದು ನಡೆದಿದೆ. ಮಕ್ಕಳ ಶಿಕ್ಷಣ ಶುಲ್ಕವನ್ನು ಭರಿಸಲು, ಕುಟುಂಬ ನಿರ್ವಹಣೆಗೂ ಸಮಸ್ಯೆಗಳು ನಾನಾ ರೀತಿಯಲ್ಲಿ ಇಂದಿಗೂ ಕಾಡುತ್ತಲೆ ಇವೆ. ಆದ್ದರಿಂದ, ಪ್ರಸ್ತುತ ಸದರಿ ಕಂದಾಯ ಗ್ರಾಮದ ಸರ್ಕಾರದ ಜಾಗದಲ್ಲಿ 12 ಎಕರೆ ಜಾಗವನ್ನು ವಕೀಲರ ನಿವೇಶನಗಳಿಗಾಗಿ ನೀಡುವಂತೆ ವಕೀಲರ ಸಂಘದ ಅಧ್ಯಕ್ಷರಾದ ಜಿ. ಹೊನ್ನೂರಪ್ಪ ವಕೀಲರ ಪರವಾಗಿ ಮಾತನಾಡಿ ಶಾಸಕರಿಗೆ ಮನವಿ ನೀಡಿದರು ಮನವಿಯನ್ನು ಶಾಸಕ ಡಾ.ಎನ್.ಟಿ. ಶ್ರೀನಿವಾಸ ಸ್ವೀಕರಿಸಿದರು. ಹಿರಿಯ ವಕೀಲರಾದ ಎಚ್ ಎಮ್ ನಾಯಕ .ಪರಸಪ್ಪ ಟಿ. ಸಿ ವಿರೂಪಾಕ್ಷಪ್ಪ ಪಾಪಯ್ಯ, ನಾಗರಾಜ ಶೆಟ್ಟು, ಕೆ.ಯಂ. ಕಾಟಯ್ಯ, ಗುರುಸಿದ್ಧನಗೌಡ್ರು, ಎಸ್.ಬಿ. ಬಸವರಾಜ, ಹೆಚ್. ವೆಂಕಟೇಶ, ದುರ್ಗೇಶ್ ಗೋವಿಂದ ರೆಡ್ಡಿ, ಗುರುಮೂರ್ತಿ, ಪ್ರಕಾಶ ಬಿ., ಸಿದ್ಧಲಿಂಗಪ್ಪ, ತಿಪ್ಪೇಸ್ವಾಮಿ, ರಘು ಶಶಿಧರ ಕೆ.ಎಂ, ಎಲ್ಲಾ ವಕೀಲರು ಪಾಲ್ಗೊಂಡಿದ್ದರು.

## ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾದ ಈರಮ್ಮಜ್ಜಿಗೆ ಜಮೀರ್ ಅಹಮದ್‌ರಿಂದ ರೂ1 ಲಕ್ಷ



**ಕೂಡ್ಲಿಗಿ,ನ.4–** ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾದ ತಾಲೂಕಿನ ಗುಂಡುಮುಣುಗು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಓಬಳಶೆಟ್ಟಿಹಳ್ಳಿ ಗ್ರಾಮದ ಶತಾಯುಷಿ ಸೂಲಗಿತ್ತಿ ಈರಮ್ಮಜ್ಜಿ ಅವರಿಗೆ ಜಿಲ್ಲಾ ಉಸ್ತುವಾರಿ ಸಚಿವ ಬಿ.ಜಡ್.ಜಮೀರ್ ಅಹ್ಮದ್ ಖಾನ್ ಅವರು ವೈಯಕ್ತಿಕವಾಗಿ ರೂ1 ಲಕ್ಷ ನೀಡಿದರು.

ಪಟ್ಟಣದ ಶಾಸಕರ ಜನ ಸಂಪರ್ಕ ಕಚೇರಿಯಲ್ಲಿ ಶುಕ್ರವಾರ ಸಂಜೆ ಶತಾಯುಷಿ ಸೂಲಗಿತ್ತಿ ಈರಮ್ಮಜ್ಜಿ ಅವರಿಗೆ ಸನ್ಮಾನಿಸಿದರು.

ಈ ವೇಳೆ ಶಾಸಕ ಡಾ.ಎನ್.ಟಿ.ಶ್ರೀನಿವಾಸ್ ಹಾಗೂ ಜಿಲ್ಲಾ ಅಧಿಕಾರಿ ಕವಿತಾ ಮನ್ನಿಕೇರಿ, ಎಸ್‌ಪಿ ಜಾಹ್ನವಿ, ಜಿಪಂ ಸಿಇಒ ನೊಂಗ್ಡಾಯ್ ಮೊಹಮ್ಮದ್ ಅಲಿ ಅಕ್ರಮ್ ಷಾ, ಪ.ಪಂ ಅಧ್ಯಕ್ಷ ಕಾವಲಿ ಶಿವಪ್ಪ ನಾಯಕ, ತಾಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರುಸಿದ್ದನಗೌಡ್ರು ಸೇರಿದಂತೆ ಜಿಲ್ಲಾ ತಾಲೂಕು ಮಟ್ಟದ ಅಧಿಕಾರಿಗಳು, ಕಾಂಗ್ರೆಸ್ ಕಾರ್ಯಕರ್ತರು, ಮುಖಂಡರು ಇತರರು ಇದ್ದರು.

## ಮನೆ ಬೀಗ ಮುರಿದು 41 ಸಾವಿರ ರೂ.ಮೌಲ್ಯದ ನಗನಾಣ್ಯ ಕಳವು

**ಕಲಬುರಗಿ,ನ.4–**ಮನೆ ಬೀಗ ಮುರಿದು 41 ಸಾವಿರ ರೂ.ಮೌಲ್ಯದ ನಗನಾಣ್ಯ ಕಳವು ಮಾಡಿರುವ ಘಟನೆ ಇಲ್ಲಿನ ಲಕ್ಷ್ಮೀನಾರಾಯಣ ನಗರದಲ್ಲಿ ನಡೆದಿದೆ.

ರೈಲ್ವೆ ಇಲಾಖೆಯಲ್ಲಿ ಹೆಲ್ತ್ ಇನ್ಸಪೆಕ್ಟರ್ ಆಗಿರುವ ಜಿತೇಂದ್ರಕುಮಾರ ಎಂಬುವವರ ಮನೆ ಬೀಗ ಮುರಿದು ಕಳ್ಳರು 15 ಸಾವಿರ ರೂ.ಮೌಲ್ಯದ 10 ಗ್ರಾಂ.ಬಂಗಾರದ ಚೈನ, 15 ಸಾವಿರ ರೂ.ಮೌಲ್ಯದ ತಲಾ 5 ಗ್ರಾಂ.ಬಂಗಾರದ 2 ಸುತ್ತುಂಗುರ, 1 ಸಾವಿರ ರೂ.ಮೌಲ್ಯದ 10 ಗ್ರಾಂ.ಬೆಳ್ಳಿಯ ಸುತ್ತುಂಗುರ, 10 ಸಾವಿರ ರೂ.ನಗದು ಸೇರಿ 41 ಸಾವಿರ ರೂ.ಮೌಲ್ಯದ ನಗನಾಣ್ಯವನ್ನು ಕಳವು ಮಾಡಿದ್ದಾರೆ.

ಜಿತೇಂದ್ರಕುಮಾರ ಅವರು ಮನೆಗೆ ಬೀಗ ಹಾಕಿಕೊಂಡು ಉತ್ತರ ಪ್ರದೇಶದ ಅಲಿಘಡದಲ್ಲಿರುವ ಪತ್ನಿ, ಮಕ್ಕಳನ್ನು ನೋಡಿಕೊಂಡು ಬರಲೆಂದು ಹೋದ ವೇಳೆ ಮನೆ ಕಳ್ಳತನವಾಗಿದೆ ಎಂದು ತಿಳಿದುಬಂದಿದೆ.

ಈ ಬಗ್ಗೆ ಸ್ಟೇಷನ್ ಬಜಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H